ಸಂಪುಟ : 9 ಸಂಚಿಕೆ 73 ಪುಟ : 4 ಬೆಲೆ: 3.00 ಶನಿವಾರ ಎಪ್ರಿಲ್ 20 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 73 Pages : 4 Price : 3.00 Saturday April 20 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಎಫ್‌ಎಸ್‌ಟಿ ತಂಡದ ಅಧಿಕಾರಿಗಳಿಗೆ ನೋಟೀಸ್

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ವಿವಿಧ ವ್ಯಾಪ್ತಿಯ ಎಫ್‌ಎಸ್‌ಟಿ ತಂಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಚುನಾವಣಾ ಆಯೋಗದ ನಿರ್ದೇಶನಗಳನ್ನು ಪಾಲಿಸದಿರುವುದು ಕಂಡುಬಂದಿದೆ.

ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಅವರು 11 ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡಿದ್ದಾರೆ. ಪ್ರಜಾಪ್ರತಿನಿಧಿ ಕಾಯ್ದೆ 1951ರ ಕಲಂ 134 ಹಾಗೂ ಕರ್ನಾಟಕ ನಾಗರಿಕ ಸೇವಾ ನಡತೆ ನಿಯಮಗಳು 1966ರ ಪ್ರಕಾರ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಎಚ್ಚರಿಕೆ ನೀಡಿದ್ದಾರೆ.

ಭಗವಾನ್ ಮಹಾವೀರ ಜಯಂತಿ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದಂತೆ ಲೋಕಸಭಾ ಚುನಾವಣೆ-2024ರ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಭಗವಾನ್ ಮಹಾವೀರ ಜಯಂತಿಯನ್ನು ಏಪ್ರಿಲ್ 21ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪುಲಿಗೆರೆ ಉತ್ಸವದಲ್ಲಿ ಮೊದಲ ಕಾರ್ಯಕ್ರಮ

ಸರ್ಫರಾಜ್ ಖಾನ್‌ರ ಸಾರಂಗಿ ವಾದನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉಸ್ತಾದ್ ಫಯಾಜ್ ಖಾನ್ ಅವರ ಹಿರಿಯ ಪುತ್ರ ಸರ್ಫರಾಜ್ ಖಾನ್ ಚಿಕ್ಕ ವಯಸ್ಸಿನಲ್ಲಿಯೇ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಅಪರೂಪದ ಸಾರಂಗಿ ವಾದಕ. ಸಂಗೀತ ವಾದ್ಯ ಸಾರಂಗಿಯನ್ನು ನುಡಿಸುತ್ತ ಬಂದಿರುವ ಒಂಬತ್ತನೆಯ ತಲೆಮಾರಿನ ಕುಡಿ ಸರ್ಫರಾಜ್ ಖಾನ್ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ 'ಪುಲಿಗೆರೆ ಉತ್ಸವ'ದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಶುಕ್ರವಾರ ಉದ್ಘಾಟನಾ ಕಾರ್ಯಕ್ರಮದ ನಂತರ ಮೊದಲ ಕಾರ್ಯಕ್ರಮವಾಗಿ ಸರ್ಫರಾಜ ಖಾನ್‌ರ ಸಾರಂಗಿ ವಾದನ ಕಾರ್ಯಕ್ರಮ ಪ್ರಾರಂಭವಾಯಿತು. ಭಟಿಯಾ ರಾಗದಲ್ಲಿ ಪ್ರಾರಂಭಿಸಿ ದೃತ್ ತೀನ್‌ತಾಲ್‌ದಲ್ಲಿ ರಾಗದ ಆಳ ಮತ್ತು ಅಗಲವನ್ನು ಅನಾವರಣ ಗೊಳಿಸಿದರು. ಸುಮಾರು 45 ನಿಮಿಷಗಳ ಕಾಲ ರಾಗದ ಚಿತ್ರಣವನ್ನು ಕಟ್ಟಿಕೊಡುವ ತಾನ್ ಮಾಲಿಕೆಗಳು, ಸಂಯೋಜನೆಗೊಂಡಿದ್ದ ಸ್ವರಗಳು ಒಟ್ಟು ಪ್ರಸ್ತುತಿಗೆ ಉತ್ಸಾಹ ತುಂಬಿದವು. ಇವರಿಗೆ ವಾದಿರಾಜ ಎಸ್.ದಂಡಾಪುರ ತಬಲಾ ಸಾಥ್ ನೀಡಿದರು.

ಶ್ರೀ ಸೋಮೇಶ್ವರ ಪಲ್ಲಕ್ಕಿ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇನ್ಫೋಸಿಸ್ ಪ್ರತಿಷ್ಠಾನದ ವತಿಯಿಂದ ನಡೆಯುತ್ತಿರುವ 7ನೇ ವರ್ಷದ 'ಪುಲಿಗೆರೆ ಉತ್ಸವ'ದ ಅಂಗವಾಗಿ ಶುಕ್ರವಾರ ಪುಲಿಗೆರೆಯ ಆರಾಧ್ಯ ದೈವ ಶ್ರೀ ಸೋಮೇಶ್ವರನ ಉತ್ಸವ ಮೂರ್ತಿಯನ್ನಿರಿಸಿದ ಪಲ್ಲಕ್ಕಿ ಮೆರವಣಿಗೆ ಸಕಲ ವಾದ್ಯ ವೈಭವಗಳೊಂದಿಗೆ ಅದ್ದೂರಿಯಾಗಿ ನೆರವೇರಿತು. ಕೊಣ್ಣೂರಿನ ರಾಯಣ್ಣ ಮಹಿಳಾ ಡೊಳ್ಳು ಮೇಳ, ನಂದಿಕೋಲು ಕುಣಿತ, ಕರಡಿ ಮಜಲು, ವಾದ್ಯಮೇಳಗಳು ಮೆರವಣಿಗೆ ರಂಗು ಹೆಚ್ಚಿಸಿದ್ದವು.

ದೇವಸ್ಥಾನದಿಂದ ಪ್ರಮುಖ ಬೀದಿಗಳ ಮೂಲಕ ಸಾಗಿದ ಮೆರವಣಿಗೆ ಮಾರ್ಗದಲ್ಲಿ ಜನತೆ ಶ್ರೀ ಸೋಮೇಶ್ವರನಿಗೆ ಭಕ್ತಿಯಿಂದ ನಮಿಸಿದರು. ಅಲಂಕೃತ ಪಲ್ಲಕ್ಕಿಯಲ್ಲಿ ಶ್ರೀ ಸೋಮೇಶ್ವರನ ಮೂರ್ತಿಯನ್ನಿರಿಸಿ, ಉದ್ಘೋಷಗಳೊಂದಿಗೆ ಪಲ್ಲಕ್ಕಿ ಮೆರವಣಿಗೆ ಪಟ್ಟಣದ ಮುಖ್ಯ ಬಜಾರ್ ಸೇರಿ ಪ್ರಮುಖ ಪ್ರದೇಶಗಳಲ್ಲಿ ಸಾಗಿ ದೇವಸ್ಥಾನದಲ್ಲಿ ಸಂಪನ್ನಗೊಂಡಿತು.

ಮೆರವಣಿಗೆಯಲ್ಲಿ ಸೋಮೇಶ್ವರ ದೇವಸ್ಥಾನ ಭಕ್ತರ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ರಾವ್, ಕಾಶಪ್ಪ ಮುಳಗುಂದ, ಈಶ್ವರ ಮೇಡ್ಲೇರಿ, ಜಿ.ಎಸ್. ಗುಡಗೇರಿ, ಸೋಮಣ್ಣ ತಂಡಿಗೇರ, ನೀಲಪ್ಪ ಕನವಳ್ಳಿ, ಎಂ.ಕೆ. ಕಳ್ಳಿಮಠ, ಮಲ್ಲೇಶಪ್ಪ ಕಣವಿ ಸೇರಿ ದೇವಸ್ಥಾನ ಭಕ್ತರ ಸಮಿತಿ ಸದಸ್ಯರು, ಮುಖಂಡರು, ಸುತ್ತಲಿನ ಗ್ರಾಮಗಳ ಭಕ್ತರು ಪಾಲ್ಗೊಂಡಿದ್ದರು.

ಮತದಾನದ ಮಹತ್ವ ಕುರಿತು ಯುವ ಮತದಾರರಿಂದ 'ಮಾನವ ಸರಪಳಿ'

ಕಡ್ಡಾಯ ಮತದಾನದಿಂದ ಪ್ರಜಾಪ್ರಭುತ್ವಕ್ಕೆ ಬಲ

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿ ಜಿಲ್ಲೆಯಲ್ಲಿ ಹೊಸದಾಗಿ 26 ಸಾವಿರ ಯುವ ಮತದಾರರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಮಾಡಿರುವುದು ವಿಶೇಷವಾಗಿದೆ. 18 ವರ್ಷ ಪೂರ್ಣಗೊಂಡ ಅರ್ಹ ಮತದಾರರೆಲ್ಲರೂ ಮತದಾನ ಮಾಡುವುದು ಅತಿ ಮುಖ್ಯವಾಗಿದೆ. ಪ್ರತಿ ಮತವೂ ಅಮೂಲ್ಯವಾಗಿದೆ. ಕಡ್ಡಾಯ ಮತದಾನದಿಂದ ಪ್ರಜಾಪ್ರಭುತ್ವದ ಬಲ ಹೆಚ್ಚಿಸಲು ಸಾಧ್ಯ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ (ಸ್ವೀಪ್) ವತಿಯಿಂದ ಮತದಾನದ ಮಹತ್ವ ಕುರಿತು ಹಮ್ಮಿಕೊಂಡಿದ್ದ 'ಯುವ ಮತದಾರರಿಂದ ಮಾನವ ಸರಪಳಿ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೇ ಮತ ಚಲಾಯಿಸುತ್ತೇವೆಂದು ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿ.ಪಂ ಸಿಇಓ ಎಸ್.ಭರತ್ ಮಾತನಾಡಿ, ಮೇ 7ರಂದು ನಡೆಯುವ ಮತದಾನದಲ್ಲಿ ಅರ್ಹರೆಲ್ಲರೂ

ಮತ ಚಲಾಯಿಸಬೇಕು. ಅರ್ಹರು ಮತದಾನದಿಂದ ವಂಚಿತರಾಗಬಾರದು. ಚುನಾವಣಾ ಪ್ರಕ್ರಿಯೆಯಲ್ಲಿ ಯುವಜನರು ಸಡಗರ-ಸಂಭ್ರಮದಿಂದ ತಮ್ಮ ಹಕ್ಕು ಚಲಾಯಿಸಬೇಕು. ಪ್ರತಿಯೊಂದು ಮತವೂ ಸಹ ಅತ್ಯಮೂಲ್ಯವಾಗಿದ್ದು, ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಕೋರಿದರು.

ಜಿಲ್ಲಾ ಚುನಾವಣಾ ರಾಯಭಾರಿ ಹಾಗೂ ಅಂತಾರಾಷ್ಟ್ರೀಯ ಕುಸ್ತಿಪಟು ಪ್ರೇಮಾ ಹುಚ್ಚಣ್ಣವರ ಮಾತನಾಡಿ, ಯುವ ಜನರು ಯಾವುದೇ ಆಸೆ-ಆಮಿಷಗಳಿಗೆ ತುತ್ತಾಗದೇ ಮತ ಚಲಾಯಿಸಬೇಕು ಎಂದು ಕರೆ ನೀಡಿದರು.

ಇನ್ನೋರ್ವ ಜಿಲ್ಲಾ ಚುನಾವಣಾ ರಾಯಭಾರಿ ಹಾಗೂ ಅಂತಾರಾಷ್ಟ್ರೀಯ ಯೋಗಪಟು ಭೀಮಪ್ಪ ಯಮನಪ್ಪ ಕಬಾಡರ ಮಾತನಾಡಿ, ರಾಷ್ಟ್ರದ ಸುಭದ್ರತೆಗೆ ಹಾಗೂ ಆರ್ಥಿಕ ಸಬಲೀಕರಣಕ್ಕೆ ಅರ್ಹರೆಲ್ಲರೂ ಕಡ್ಡಾಯವಾಗಿ ಮತದಾನದ ಹಕ್ಕು ಚಲಾಯಿಸಬೇಕು. ಆ ನಿಟ್ಟಿನಲ್ಲಿ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಕರೆ ನೀಡಿದರು.

ಜಿ.ಪಂ ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಸಮಿತಿಯ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ. ದೇವರಮನಿ, ತಾ.ಪಂ ಇಓ ಮಾಣಿಕರಾವ್ ಪಾಟೀಲ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ವಿವಿಧ ಇಲಾಖೆಯ ಅಧಿಕಾರಿಗಳು, ಶಾಲಾ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು ಇತರರು ಇದ್ದರು. ಗದಗ ನಗರದ ವಿವಿಧ ಕಾಲೇಜಿನ ನೂರಾರು ಯುವ ಮತದಾರರು ಮಾನವ ಸರಪಳಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗಮನ ಸೆಳೆದರು.

> ಚುನಾವಣೆಗೆ ಸಂಬಂಧಿಸಿದಂತೆ ಸಹಾಯವಾಣಿ ಸಂಖ್ಯೆ 1950 ಅಥವಾ ಸಿವಿಜಲ್ ಆಪ್ ಮೂಲಕ ದೂರು ದಾಖಲಿಸಬಹುದಾಗಿದ್ದು, ಚುನಾವಣೆಗೆ ಸಂಬಂಧಿಸಿದ ಮಾಹಿತಿಗಳನ್ನು ನೀಡಬಹುದಾಗಿದೆ. ಜಿಲ್ಲೆಯಲ್ಲಿ ಶೇಕಡಾವಾರು ಮತದಾನ ಹೆಚ್ಚಳಕ್ಕೆ ಯುವ ಮತದಾರರ ಪಾತ್ರ ಹೆಚ್ಚಿನದಾಗಿದೆ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಮತದಾನ ಪ್ರಕ್ರಿಯೆಯಲ್ಲಿ ತೊಡಗಿಸಿಕೊಂಡಾಗ ಪ್ರಜಾಪ್ರಭುತ್ವ ಬಲಪಡಿಸಲು ಸಾಧ್ಯ.
>
> – ವೈಶಾಲಿ ಎಂ.ಎಲ್.
> ಗದಗ ಜಿಲ್ಲಾಧಿಕಾರಿಗಳು

ಜನತಾ ಸಂವಾದ ಸದನದಲ್ಲಿ ಪಾಲ್ಗೊಳ್ಳಲಿರುವ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ| ಸಂಘ ಸಂಸ್ಥೆಗಳಿಗೆ ಪಾಲ್ಗೊಳ್ಳಲು ಅನಿಲ್ ಮೆಣಸಿನಕಾಯಿ ಮನವಿ

ಇಂದು ಜನತಾ ಸಂವಾದ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದು ಶನಿವಾರ ಗದಗ ಜಿಲ್ಲೆಯ ಎಲ್ಲ ಸಂಘ ಸಂಸ್ಥೆಗಳು ಹಾಗೂ ಇತರ ಕ್ಷೇತ್ರಗಳ ಪ್ರಮುಖರೊಂದಿಗೆ ನಡೆಯುವ ಜನತಾ ಸಂವಾದ ಸದನದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ಮುಖಂಡ ಅನಿಲ್ ಮೆಣಸಿನಕಾಯಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಎಪಿಎಂಸಿಯ ಸ್ವಾಮಿ ವಿವೇಕಾನಂದ ಸಭಾ ಭವನದಲ್ಲಿ ಮುಂಜಾನೆ 11ಗಂಟೆಗೆ ಜನತಾ ಸಂವಾದ ಸದನ ನಡೆಯಲಿದ್ದು, ನಮ್ಮ ಕ್ಷೇತ್ರದ ಅಭಿವೃದ್ಧಿ ಮತ್ತು ಸಮಸ್ಯೆಗಳ ಬಗೆಗೆ ಬೆಳಕು ಚೆಲ್ಲುವ ಉದ್ದೇಶವನ್ನಿಟ್ಟುಕೊಂಡು ದೇಶದಲ್ಲೇ ಮೊಟ್ಟಮೊದಲು ಎಂಬಂತೆ ಹಮ್ಮಿಕೊಂಡಿರುವ ಜನತಾ ಸಂವಾದ ಸದನದಲ್ಲಿ ಜಿಲ್ಲೆ ಎಲ್ಲ ಸಂಘ, ಸಂಸ್ಥೆ ಸೇರಿದಂತೆ ಕ್ಷೇತ್ರದ ಜನರು ಪಾಲ್ಗೊಳಬೇಕೆಂದು ವಿನಂತಿಸಿದ್ದಾರೆ.

ಈ ಸಂವಾದದಲ್ಲಿ ಕ್ಷೇತ್ರದ ಸಮಸ್ಯೆಗಳ ಬಗೆಗೆ ಗಮನ ಸೆಳೆದು ಪರಿಹಾರ ಕಂಡುಕೊಳ್ಳಲು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ,

ಮಾಜಿ ಸಚಿವ ಸಿ.ಸಿ.ಪಾಟೀಲ ಸೇರಿದಂತೆ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗಿದೆ. ಅವರ ಜೊತೆ ನೇರವಾಗಿ ಸಂವಾದದಲ್ಲಿ ತಾವು ಭಾಗಿಯಾಗಬಹುದು.

ಕ್ಷೇತ್ರದ ಜ್ವಲಂತ ಸಮಸ್ಯೆಗಳು, ಮೂಲಭೂತ ಸೌಕರ್ಯ, ಕ್ರೀಡೆ, ಉದ್ಯೋಗ, ಶಿಕ್ಷಣ, ಸರಕಾರದ ಯೋಜನೆಗಳು, ಅಭಿವೃದ್ಧಿ ಕಾರ್ಯಗಳು ಸೇರಿದಂತೆ ಸಾರ್ವಜನಿಕ ಸಮಸ್ಯೆಗಳನ್ನು ಸಂವಾದದಲ್ಲಿ ಪ್ರಶ್ನೆ ಮಾಡುವ ಮೂಲಕ ಅವುಗಳಿಗೆ ಪರಿಹಾರ ಪಡೆದುಕೊಳ್ಳುವ, ಕ್ಷೇತ್ರದ ಅಭಿವೃದ್ಧಿ ಪರ ಚಿಂತನೆ ಅದ್ಭುತ ಅವಕಾಶ ಜನತಾ ಸಂವಾದ ಸದನದ್ದಾಗಿದೆ. ಪಕ್ಷಾತೀಯವಾಗಿ, ಜಾತ್ಯಾತೀತವಾಗಿ ಜನತಾ ಸಂವಾದ ಸದನ ನಡೆಯಲಿದೆ ಎಂದು ತಿಳಿಸಿದ್ದಾರೆ.

ಜಾತ್ಯಾತೀತ, ಪಕ್ಷಾತೀತ, ಲಿಂಗಭೇದವಿಲ್ಲದ, ಸ್ವಾರ್ಥರಹಿತ ಚಿಂತನೆಯ ನಡೆಯಲ್ಲಿ ಗದಗ ಜಿಲ್ಲೆಯ ಎಲ್ಲ ಸಂಘ, ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರು, ಆತ್ಮೀಯರು, ಹಿತೈಷಿಗಳು, ಬಂಧುಗಳು, ಪ್ರೇರಣೆಯ ವ್ಯಕ್ತಿ ಶಕ್ತಿಗಳು, ಮಹಿಳಾ ಸಂಘಟನೆಗಳು, ಸಮಾಜಮುಖಿ ಚಿಂತಕರು ಸೇರಿದಂತೆ ಅವರಿವರೆನ್ನದೆ ಪ್ರತಿಯೊಬ್ಬರು ಪಾಲ್ಗೊಳ್ಳಬೇಕೆಂದು ಅನಿಲ ಮೆಣಸಿನಕಾಯಿ ಮನವಿ ಮಾಡಿದ್ದಾರೆ.

ಪ್ರಜಾಪ್ರಭುತ್ವ ಹಬ್ಬದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಲು ಡಾ. ಸಜ್ಜನ ಕರೆ

ಮನೆ ಮನೆಗೆ ಭೇಟಿ ನೀಡಿ ಗುಲಾಬಿ ಹೂ ಕೊಟ್ಟು ಮತ ಕೇಳಿದ ಅಧಿಕಾರಿಗಳು

■ ವಿಜಯಸಾಕ್ಷಿ ಸುದ್ದಿ, ರೋಣ

ಭಾರತ ಪ್ರಜಾಪ್ರಭುತ್ವ ರಾಷ್ಟ್ರ, ಈ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತಕ್ಕೆ ಬಹಳ ಮೌಲ್ಯವಿದೆ. ಪ್ರತಿಯೊಬ್ಬರು ಪ್ರಜಾಪ್ರಭುತ್ವದ ಹಬ್ಬದಲ್ಲಿ ಮತ ಚಲಾಯಿಸುವ ಮೂಲಕ ಮತದ ಮೌಲ್ಯವನ್ನು ಹೆಚ್ಚಿಸಿ ಎಂದು ನರಗುಂದ ವಿಧಾನ ಸಭಾ ಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿ ಡಾ ಹಂಪಣ್ಣ ಸಜ್ಜನ ಹೇಳಿದರು.

ರೋಣ ತಾಲೂಕಿನ ಹೊಳೆ ಆಲೂರ ಗ್ರಾಮದಲ್ಲಿ ಜಿಲ್ಲಾ ಮತ್ತು ತಾಲೂಕ ಸ್ವಿಪ್ ಸಮಿತಿಯ ಸಹಯೋಗದೊಂದಿಗೆ ನರಗುಂದ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಎಲ್ಲಾ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಸೇರಿದಂತೆ ವಿವಿಧ ಇಲಾಖೆ ನೌಕರರ ಜೊತೆಗೂಡಿ ಬೃಹತ್ ಮತದಾನ ಕಾರ್ಯಕ್ರಮದಲ್ಲಿ ಮತದಾನದ ಪ್ರತಿಜ್ಞಾ ವಿಧಿ ಭೋದಿಸಿ ಮಾತನಾಡಿದರು.

ಪ್ರತಿ ಚುನಾವಣೆಯಲ್ಲಿ ಹೊಳೆ ಆಲೂರ ಗ್ರಾಮದಲ್ಲಿ ಕಡಿಮೆ ಮತದಾನ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಈ ಗ್ರಾಮದಲ್ಲಿ ಬೃಹತ್ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಪ್ರಮಾಣದಲ್ಲಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವ ಗೆಲ್ಲಿಸಿ, ಮತದಾನದ

ಮೇ 7 ರಂದು ಮತದಾನ ಮಾಡಲು ಗುಲಾಬಿ ಹೂ ಕೊಡವ ಮೂಲಕ ಕರೆ

ಮೇ 7 ರಂದು ಬೆಳಿಗ್ಗೆ 7:00 ಗಂಟೆಯಿಂದ ಸಾಯಂಕಾಲ 6:00 ಗಂಟೆಯವರೆಗೆ ನಡೆಯಲಿರುವ ಲೋಕಸಭಾ ಚುನಾವಣೆ ಮತದಾನ ಪ್ರಕ್ರಿಯೆಯಲ್ಲಿ ಗ್ರಾಮದ ಎಲ್ಲಾ ಮತದಾರರು ತಮ್ಮ ಕುಟುಂಬದ ಸದಸ್ಯರೊಂದಿಗೆ ಮತಗಟ್ಟೆಗೆ ತೆರಳಿ ಮತದಾನ ಮಾಡಿ ಎಂದು ಮನೆ ಮನೆಗೆ ಗುಲಾಬಿ ಹೂವು ಕೊಡುವ ಮೂಲಕ ಮನವಿ ಮಾಡಿದರು. ಕಡ್ಡಾಯವಾಗಿ ಚುನಾವಣಾ ಆಯೋಗವು ನೀಡಿದ ಮತದಾರರ ಗುರುತಿನ ಚೀಟಿ , ಆಧಾರ್ ಕಾರ್ಡ್ ಸೇರಿದಂತೆ ಚುನಾವಣೆ ಆಯೋಗವು ನಿಗದಿಪಡಿಸಿದ ಯಾವುದಾದರೊಂದು ದಾಖಲೆಯೊಂದಿಗೆ ಹಾಜರಾಗಿ ಸದೃಡ ಹಾಗೂ ಮಾದರಿ ರಾಷ್ಟ ನಿರ್ಮಾಣಕ್ಕೆ ಮುಂದಾಗಿ ಎಂದು ಹೇಳಿದರು.

ದಿನ ರಜೆ ಇರುವುದರಿಂದ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿಕೊಳ್ಳಳು ವಿನಂತಿಸಿದರು.

ರೋಣ ತಾಲೂಕ ಸ್ವಿಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಎಸ್ ಕೆ ಇನಾಮದಾರ ಮಾತನಾಡಿ, ಉತ್ತಮ ಭಾರತಕ್ಕಾಗಿ ಮೇ 7 ರಂದು ಎಲ್ಲರೂ ತಪ್ಪದೇ ಮತದಾನ ಮಾಡಿ, ನಿಮ್ಮ ಮತವು ದೇಶಕ್ಕೆ ಬುನಾದಿ ಆಗಿದೆ, ಮತ ಹಾಕುವ ಮೂಲಕ ಬುನಾದಿಯನ್ನು ಸದೃಢಗೊಳಿಸಿ. ಈ ಬಾರಿ ಪ್ರತಿಯೊಬ್ಬರೂ ಮತದಾನ ಮಾಡಿ ಶೇ 100 ರಷ್ಟು ಮತದಾನದ ಮಾಡೋಣ

ಸಂಪಾದಕೀಯ

ಧರ್ಮವನ್ನೇ ಅಪರಾಧಿ ಮಾಡಿದರೆ...

ಮಡುಗಟ್ಟಿದ ದುಃಖ, ಆಕ್ರೋಶದ ಮಧ್ಯೆಯು ಹುಬ್ಬಳ್ಳಿಯಲ್ಲಿ ಬರ್ಬರವಾಗಿ ಕೊಲೆಯಾದ ವಿದ್ಯಾರ್ಥಿನಿ ನೇಹಾ ಹಿರೇಮಠ ಅಂತ್ಯಕ್ರಿಯೆ ನೆರವೇರಿದೆ. ಪೊಲೀಸರು ಕ್ಷಿಪ್ರ ಕಾರ್ಯಚರಣೆ ನಡೆಸಿ ಆರೋಪಿಯನ್ನ ಬಂಧಿಸಿದ್ದಾರೆ. ರಾಜ್ಯಾದ್ಯಂತ, ದೇಶಾದ್ಯಂತ ಈ ಘಟನೆಗೆ ಖಂಡನೆ ವ್ಯಕ್ತವಾಗಿದೆ. ಆರೋಪಿಗೆ ಎನ್‌ಕೌಂಟರ್ ಮಾಡಬೇಕು ಎನ್ನುವ ಜನಾಕ್ರೋಶದ ಮಾತುಗಳು ಸಹ ವ್ಯಕ್ತವಾಗಿದೆ.

ವಿದ್ಯಾರ್ಥಿನಿಯನ್ನ ಕೊಲೆ ಮಾಡಿದ ಆರೋಪಿಗೆ ಕಠಿಣ ಶಿಕ್ಷೆ ಆಗಲೇಬೇಕು. ಪೊಲೀಸರು ಮತ್ತು ನ್ಯಾಯಾಂಗ ವ್ಯವಸ್ಥೆ ವಿಳಂಬಕ್ಕೆ ಅವಕಾಶ ನೀಡದಂತೆ ಅತ್ಯಂತ ಕಠಿಣವಾದ ಶಿಕ್ಷೆಯನ್ನ ನೀಡಬೇಕು. ಆ ಮೂಲಕ ಮಗಳನ್ನು ಕಳೆದುಕೊಂಡ ಕುಟುಂಬಕ್ಕೆ ಸಾಂತ್ವನ, ಸಮಾಜಕ್ಕೆ ಸ್ಪಷ್ಟ ಸಂದೇಶವನ್ನು ನೀಡುವ ಕೆಲಸ ಆಗಬೇಕು.

ಆದರೆ ಈ ಪ್ರಕರಣವನ್ನ ಈಗ ಧರ್ಮಕ್ಕೆ ತಳಕು ಹಾಕುವ ಕೆಲಸ ಮಾಡಲಾಗುತ್ತಿದೆ. ಜಾತಿ ಧರ್ಮವನ್ನ ಕಟಕಟೆಯಲ್ಲಿ ನಿಲ್ಲಿಸುವ ಮೂಲಕ ದ್ವೇಷ ರಾಜಕಾರಣವನ್ನ ಸೃಷ್ಟಿಸುವ ಬಹುದೊಡ್ಡ ಹುನ್ನಾರ ನಡೆಯುತ್ತಿದೆ.

ಕೊಲೆ ಮಾಡಿದ ಆರೋಪಿ ಯಾವುದೇ ಧರ್ಮದವನಾಗಿರಲಿ, ಅವನು ಆರೋಪಿಯೆ. ಅವನಿಗೆ ಕಠಿಣ ಶಿಕ್ಷೆ ಆಗಲೇಬೇಕು. ಆದರೆ ಕೊಲೆ ಮಾಡಿದ ಆರೋಪಿಯ ಜಾತಿ, ಧರ್ಮ ಏನು ತಪ್ಪು ಮಾಡಿದೆ?

ಪಾಲಕರು ತಮ್ಮ ಮಕ್ಕಳಿಗೆ ಸಂಸ್ಕಾರ ಕೊಡಬೇಕು. ಧರ್ಮ ಮಾರ್ಗದಲ್ಲಿ ನಡೆಯುವಂತಹ ನೈತಿಕ ಶಿಕ್ಷಣವನ್ನ ನೀಡಬೇಕು. ಆ ಕೆಲಸವನ್ನು ಪೋಷಕರು ಸರಿಯಾಗಿ ನಿರ್ವಹಿಸಿದರೂ, ಮಕ್ಕಳು ದುಷ್ಟರ ಸಹವಾಸಕ್ಕೆ ಬಿದ್ದು ದಾರಿ ತಪ್ಪುತ್ತಾರೆ. ನೀಚ ಕೃತ್ಯಗಳನ್ನು ಮಾಡುತ್ತಾರೆ. ಯಾರೋ ಒಬ್ಬರು ಮಾಡಿದ ಕೆಲಸಕ್ಕೆ ಇಡೀ ಸಮಾಜವನ್ನೇ ಆರೋಪಿ ಮಾಡುವುದು ಎಷ್ಟು ಸರಿ?

ಧರ್ಮಗಳು ಮನುಷ್ಯನಿಗೆ ಸರಿದಾರಿಯಲ್ಲಿ ನಡೆಯುವಂತೆ ಹೇಳುತ್ತವೆ. ಮನುಷ್ಯ ಅದನ್ನು ಬಿಟ್ಟು ನಡೆದರೆ ಯಾರು, ಯಾವ ಧರ್ಮ ಏನು ಮಾಡಲು ಸಾಧ್ಯ?

ಎಪ್ರಿಲ್-ಮೇ ತಿಂಗಳ ಮೆರುಗಿಗೆ ಮೊಹರು ಒತ್ತಿದ ಗುಲ್ ಮೊಹರ್

ಕಣ್ಮನ ಸೆಳೆಯುವ ಹೂಗಳ ಲೋಕ

ನನ್ನೂರು ರಾಮಗೇರಿಯಿಂದ ಬಟ್ಟೂರ ಹಾಗೂ ಗೊಜನೂರ ಮಾರ್ಗವಾಗಿ ಕರ್ತವ್ಯದ ನಿಮಿತ್ತ ಪ್ರತಿದಿನ ಶಿರಹಟ್ಟಿಗೆ ಹೋಗಿ ಬರುತ್ತಿರುತ್ತೇನೆ. ಹೋಗಿ ಬರುವ ಮಾರ್ಗದ ರಸ್ತೆ ಬದಿಯಲ್ಲಿ ಅಬ್ಬಾ..! ಕೆಂಪು ಹೂಗಳ ಸಂಭ್ರಮ ಈಗ ಹೇಳತೀರದು. 'ಹೂವಿನಿಂದ ನಾರು ಸ್ವರ್ಗಕ್ಕೇರಿತು' ಎಂಬಂತೆ ತನ್ನ ಕೆಂಬಣ್ಣದ ಚೆಲುವ ಸಿರಿಯ ಹೂಗಳಿಂದ ಕ್ಷಣ ಮನಸ್ಸು ಮುದಗೊಳಿಸುವ, ತನ್ನ ಅಂದದ ಬಣ್ಣದಿಂದ ಆಕರ್ಷಿಸುವ 'ಗುಲ್ ಮೊಹರ್' ಹೂಗಳು ಬಿರು ಬೇಸಿಗೆಯ ಬಿಸಿಲ(ಬೆಂಕಿಯ)ಲ್ಲಿ ಅರಳುವ ಸುಂದರಿಯರು ಎಂದರೆ ಉತ್ಪ್ರೇಕ್ಷೆಯಲ್ಲ.

ಹೀಗೆ ಬಹುತೇಕ ರಸ್ತೆ ಪಕ್ಕದ ಮರಗಳಲ್ಲಿ ಗೋಚರಿಸುವ ವಿಶಿಷ್ಟ, ಅಷ್ಟೇ ವಿಭಿನ್ನ ಬಗೆಯಲ್ಲಿ ಬೆಳೆದು ನಿಲ್ಲುವ ಈ ಗುಲ್ ಮೊಹರ್ ಮರಗಳಲ್ಲಿನ ಕೆಂಪು ಹೂಗಳನ್ನು ಕಂಡ ಕ್ಷಣ ಮನಸ್ಸು ಸೆಳೆವ ಜೊತೆಗೆ ಹಿತಾನುಭವ ನೀಡುತ್ತವೆ. ಈ ಭಾಗದಲ್ಲಿ ಸ್ಥಳಗಳನ್ನು ವೀಕ್ಷಿಸಲು ಪ್ರವಾಸಕ್ಕೆ ಬರುವ ಪ್ರವಾಸಿಗರಿಗೆ ತನ್ನ ಸೊಬಗಿನಿಂದ ಈ ಗುಲ್ ಮೊಹರ್ ಹೂವಿನ ಮರಗಳು ವಿಶಿಷ್ಟ ಸ್ವಾಗತ ಕೋರಿ, ಮನಸ್ಸಿಗೆ ಸಂತೋಷ ನೀಡುತ್ತವೆ. ಇವುಗಳಿಗೆ ಉತ್ತರ ಕರ್ನಾಟಕದಲ್ಲಿ ಸಂಕೇಶ್ವರ ಮರ ಎಂದೇ ಹೆಸರು. ಈ ಗಿಡಗಳು ಪ್ರವಾಸಿಗರನ್ನು ಆಕರ್ಷಿಸುವ ವಿಶಿಷ್ಟವಾದ ಗುಣಗಳನ್ನು ಹೊಂದಿವೆ.

ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಈ ಬಾರಿ ಕೆಂಡದಂತಹ ಉರಿ ಬಿಸಿಲು. ಸೆಕೆಯ ಸಂಕಟ, ತಾಪಕ್ಕೆ ದೂರ ಓಡುವಂತೆ ಮಾಡಿದ್ದರೆ, ಅಂಥಾ ಬಿಸಿಲಲ್ಲಿ ಗುಲ್ (ಹೂ) ಮೊಹರ್ (ನವಿಲು) ಜೀವ ಕಳೆ ಪಡೆದಿರುವಂತೆ, ನಸು ನಗುತ್ತಲೇ ಎಲ್ಲರ ಚಿತ್ತವನ್ನು ತನ್ನತ್ತ ಸೆಳೆಯುವುದು ಈ ಹೂವಿನ ವಿಶೇಷತೆ.

ಡೆಲೋನಿಕ್ಸ್ ರೆಜಿಯಾ ಎಂಬುದು ಗುಲ್‌ಮೊಹರ್ ಮರದ ವೈಜ್ಞಾನಿಕ ಹೆಸರು. ಇದು ಮಡಗಾಸ್ಕರ್‌ನಲ್ಲಿ ಸ್ಥಳೀಯವಾದ ಸೀಸಲ್ಪಿನಿಯೊಡೆಯೇ ಉಪಕುಟುಂಬದ ಫ್ಯಾಬೇಸಿಯ ಹುರುಳಿ ಕುಟುಂಬದಲ್ಲಿ ಹೂ ಬಿಡುವ ಸಸ್ಯದ ಒಂದು ಜಾತಿಯಾಗಿದೆ.

ಸಸ್ಯಶಾಸ್ತ್ರಜ್ಞ ವೆನ್ಸೆಲ್ ಬೋಜರ್ 19ನೇ ಶತಮಾನದ ಆರಂಭದಲ್ಲಿ ಅದರ ಸ್ಥಳೀಯ ಮೂಲವನ್ನು ಮಡಗಾಸ್ಕರ್‌ನಲ್ಲಿ ಕಂಡುಹಿಡಿದರು. ಗುಲ್‌ಮೊಹರ್ ಹೂವಿನಲ್ಲಿಯೇ ಅದ್ದೂರಿ ಮರವಾಗಿದೆ. ಕೆಲವರು ವಿಶ್ವದ ಅತ್ಯಂತ ವರ್ಣರಂಜಿತ ಮರ ಎಂದು ಹೇಳುತ್ತಾರೆ. ವಸಂತ ಮತ್ತು ಬೇಸಿಗೆಯಲ್ಲಿ ಹಲವಾರು ವಾರಗಳವರೆಗೆ ಇದು ಜ್ವಾಲೆಯಾಗಿರುತ್ತದೆ. ಈ ರೀತಿ ಕೆಂಪು ಹೂವುಗಳು ಗುಲ್‌ಮೊಹರ್ ಮರ ಸಮೃದ್ಧ ಸಮೂಹಗಳಿಂದ ಮುಚ್ಚಲ್ಪಟ್ಟಿರುತ್ತದೆ.

ಪ್ರಪಂಚದ ಅನೇಕ ಉಷ್ಣವಲಯದ ಭಾಗಗಳಲ್ಲಿ ಇದನ್ನು ಅಲಂಕಾರಿಕ ಮರವಾಗಿ ಬೆಳೆಸಲಾಗುತ್ತದೆ ಮತ್ತು ಇಂಗ್ಲೀಷಿನಲ್ಲಿ ಇದು ರಾಯಲ್ ಪೊಯಿನ್ಸಿಯಾನಾ, ಫ್ಲಾಂಬಾಯಿಂಟ್, ಫೀನಿಕ್ಸ್ ಹೂವು, ಕಾಡಿನ ಜ್ವಾಲೆ ಅಥವಾ ಜ್ವಾಲೆಯ ಮರ ಎಂದೇ ಹೆಸರುವಾಸಿಯಾಗಿದೆ.

ಹೀಗಾಗಿ ಭಾರತದಲ್ಲಿ ಇದನ್ನು ಮೇ ಹೂವಿನ ಮರ, ಗುಲ್ ಮೊಹರ್ ಎಂದು ಕರೆಯಲಾಗುತ್ತದೆ. ಹಾಗೇಯೇ ಪಶ್ಚಿಮ ಬಂಗಾಳ ಮತ್ತು ಒಡಿಶಾದಲ್ಲಿ ಇದನ್ನು ಕೃಷ್ಣ ಚುರಾ ಎಂದು ಕರೆಯಲಾಗುತ್ತದೆ. ಸ್ವಲ್ಪ ಸಮಯದವರೆಗೆ ಇದನ್ನು ನೆರಳಿನ ಮರವಾಗಿ ಪರಿಚಯಿಸಲು ಕಾರಣವಾದ ಬ್ರಿಟಿಷ್ ನಾಗರಿಕ ಸೇವಕ ಮೆಸುರಿಯರ್ ನಂತರ ಇದನ್ನು ಲಾಮಾಸೂರಿಯ ಮರ ಎಂದು ಕರೆಯಲಾಯಿತು.

ಕೇರಳದಲ್ಲಿ ರಾಯಲ್ ಪೊಯಿನ್ಸಿಯಾನಾವನ್ನು ಕಾಲ್ಚರಿಪ್ಪು ಎಂದು ಕರೆಯಲಾಗುತ್ತದೆ. ಕೇರಳದ ಸಂತ ಥಾಮಸ್ ಕ್ರಿಶ್ಚಿಯನ್ನರಲ್ಲಿ ಒಂದು ಜನಪ್ರಿಯ ನಂಬಿಕೆಯಿದೆ. ಅದೇನೆಂದರೆ, ಯೇಸುವನ್ನು ಶಿಲುಬೆಗೇರಿಸಿದಾಗ, ಅವನ ಶಿಲುಬೆಯ ಸಮೀಪದಲ್ಲಿ ಒಂದು ಸಣ್ಣ ರಾಯಲ್ ಪೊಯಿನ್ಸಿಯಾನ ಮರವಿತ್ತು. ಮರದ ಹೂವುಗಳ ಮೇಲೆ ಯೇಸುಕ್ರಿಸ್ತನ ರಕ್ತವು ಚೆಲ್ಲಲ್ಪಟ್ಟಿತು ಮತ್ತು ರಾಯಲ್ ಪೊಯಿನ್ಸಿಯಾನಾ ಹೂವುಗಳು ತೀಕ್ಷ್ಣವಾದ ಕೆಂಪು ಬಣ್ಣವನ್ನು ಪಡೆಯುತ್ತವೆ ಎಂದು ನಂಬಲಾಗಿದೆ.

ಇದಲ್ಲದೆ ಗುಲ್‌ಮೊಹರ್ ವಿಷಕಾರಿಯಲ್ಲದ ಮತ್ತು ಹೂವಿನ ಮೊಗ್ಗುಗಳು ಖಾದ್ಯ ಮತ್ತು ಸುವಾಸನೆಗಾಗಿ ಬಳಸಲಾಗುತ್ತದೆ. ಆದರೆ ಗುಲ್‌ಮೊಹರ್ ಕಾಡಿನಲ್ಲಿ ಅಳಿವಿನಂಚಿನಲ್ಲಿರುವುದು ವಿಷಾದನೀಯ. ಇದು ಆಳವಿಲ್ಲದ ಬೇರುಗಳನ್ನು ಹೊಂದಿರುವ ದೀರ್ಘಕಾಲಿಕ ಸಸ್ಯವಾಗಿದ್ದರಿಂದ ಭಾರೀ ಗಾಳಿ ಮತ್ತು ಮಳೆಯ ಸಮಯದಲ್ಲಿ ಬೀಳುವ ಸಾಧ್ಯತೆಯಿದೆ.

ಜಿಲ್ಲಾ ಹಾಗೂ ರಾಜ್ಯ ಹೆದ್ದಾರಿ ನಿರ್ಮಾಣಕ್ಕಾಗಿ ಕಳೆದ ಆರೇಳು ವರ್ಷಗಳ ಹಿಂದೆ ಸಾವಿರಾರು ಗುಲ್ ಮೊಹರ್ ಮರಗಳ ಮಾರಣ ಹೋಮವಾಗಿದೆ. ಅಭಿವೃದ್ಧಿ ಹಾಗೂ ತಂತ್ರಜ್ಞಾನದ ಹೊಡೆತಕ್ಕೆ ಸಿಲುಕಿ ಮುಂಬರುವ ದಿನಗಳಲ್ಲಿ ಈ ಸುಂದರ 'ಗುಲ್ ಮೊಹರ್' ಹೂ ಪ್ರಕೃತಿ ಪ್ರಿಯರಿಗೆ ಅಪರೂಪ ಆಗುತ್ತಿವೆ ಎಂಬುದು ಬೇಸರದ ಸಂಗತಿ. ಒಟ್ಟಾರೆಯಾಗಿ ನನ್ನ ದೃಷ್ಟಿಯಲ್ಲಿ ಈ 'ಮೇ ಫ್ಲವರ್' ಕೆಂಪು ಬಿಸಿಯಾದ ಎಪ್ರೀಲ್/ ಮೇನಲ್ಲಿ ತಮ್ಮ ಆಕರ್ಷಕವಾದ ಕೆಂಪು ಹೂವುಗಳೊಂದಿಗೆ ಸಸ್ಯ ಪ್ರೇಮಿಗಳ ಹೃದಯದಲ್ಲಿ ಶಾಶ್ವತವಾದ ಪ್ರಭಾವ ಬೀರುತ್ತವೆ. ಹಾಗೆಯೇ ಮನಸ್ಸಿಗೆ ಮುದ ನೀಡುವ ಮೂಲಕ ಆರೋಗ್ಯ ಚೇತನಕ್ಕೆ ಇಂಬು ನೀಡುತ್ತವೆ.

– ಬಸವರಾಜ ಎಮ್.ಯರಗುಪ್ಪಿ.
ಬಿಆರ್‌ಪಿ, ಶಿರಹಟ್ಟಿ.

ಆಯುಷ್ ಪಾನೀಯ ಪರಿಚಯ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆಯ ಸಹಯೋಗದಲ್ಲಿ ಆಯುಷ್ ಪಾನೀಯ ಪರಿಚಯ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಆಯುಷ್ ನಿರ್ದೇಶನಾಲಯದ ಮಾರ್ಗಸೂಚಿಗಳನುಸಾರ ರಾಜ್ಯಾದ್ಯಂತ ಇತ್ತೀಚಿನ ದಿನಗಳಲ್ಲಿ ತಾಪಮಾನವು ದಾಖಲೆ ಮಟ್ಟದಲ್ಲಿ ಏರಿಕೆ ಆಗುತ್ತಿದ್ದು, ಈ ಬೇಸಿಗೆಯ ಸುಡು ಬಿಸಿಲಿನ ದಿನಗಳಲ್ಲಿ ಸಾರ್ವಜನಿಕರಿಗೆ ಆರೋಗ್ಯಕರವಾದ ಪಾನೀಯಗಳ ಸೇವನೆ ಬಗ್ಗೆ ಜಾಗೃತಿ ಮೂಡಿಸಲು ಹಾಗೂ ಆಯುಷ್ ಪದ್ಧತಿಗಳಲ್ಲಿ ಪಾನೀಯಗಳ ಮಹತ್ವವನ್ನು ಪರಿಚಯಿಸುವ ದೃಷ್ಟಿಯಿಂದ ಆಯುಷ್ ಪಾನೀಯ ಪರಿಚಯ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚುನಾವಣಾ ಕೊಠಡಿಯಲ್ಲಿನ ಲೋಕಸಭಾ ಚುನಾವಣಾ ಕರ್ತವ್ಯ ನಿರತ ಅಧಿಕಾರಿ, ಸಿಬ್ಬಂದಿಯವರಿಗೆ ಮತ್ತು ಜಿಲ್ಲಾಧಿಕಾರಿಗಳ ಕಛೇರಿಗೆ ಆಗಮಿಸುವ ಸಾರ್ವಜನಿಕರಿಗಾಗಿ ಹಮ್ಮಿಕೊಂಡು, ಉಚಿತವಾಗಿ ಚಿಂಚಾ ಪಾನಕವನ್ನು ವಿತರಿಸಲಾಯಿತು.

ಇದರಿಂದ ವ್ಯಕ್ತಿಯ ಜೀರ್ಣಕ್ರಿಯೆ ಉತ್ತಮಗೊಳ್ಳುತ್ತದೆ, ಮಲಬದ್ಧತೆಯನ್ನು ನಿವಾರಿಸುವುದು, ಬಾಯಾರಿಕೆಯನ್ನು ನೀಗಿಸುವುದು ಸೇರಿದಂತೆ ಅನೇಕ ಉಪಯೋಗಗಳಿವೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡೆ ತಿಳಿಸಿದರು.

ಕೇಜ್ರಿವಾಲ್ ವಿರುದ್ಧ ಜೈಲಿನಲ್ಲಿ ಸಂಚು, ಏನು ಬೇಕಾದರೂ ಆಗಬಹುದು: ಸಂಜಯ್ ಸಿಂಗ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ವಿರುದ್ಧ ಆಳವಾದ ಪಿತೂರಿ ನಡೆಸಲಾಗುತ್ತಿದೆ ಮತ್ತು ಜೈಲಿನಲ್ಲಿ ಅವರಿಗೆ ಏನು ಬೇಕಾದರೂ ಆಗಬಹುದು ಎಂದು ಎಎಪಿ ರಾಜ್ಯಸಭಾ ಸಂಸದ ಸಂಜಯ್ ಸಿಂಗ್ ಶುಕ್ರವಾರ ತಮ್ಮ ಪಕ್ಷದ ಆರೋಪವನ್ನು ಪುನರುಚ್ಚರಿಸಿದ್ದಾರೆ.

ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, "ಬಿಜೆಪಿಯ ಮೋಡಸ್ ಆಪರೇಂಡಿ ಯಾರನ್ನಾದರೂ ಕೊಲ್ಲುವ ಮಟ್ಟಕ್ಕೆ ಇಳಿಯಬಹುದು" ಎಂದು ಸಿಂಗ್ ಆರೋಪಿಸಿದರು. ಆದರೆ, ಈವರೆಗೆ ಸಿಂಗ್ ಅವರ ಆರೋಪದ ಬಗ್ಗೆ ಬಿಜೆಪಿಯಿಂದ ಯಾವುದೇ ತಕ್ಷಣದ ಪ್ರತಿಕ್ರಿಯೆ ಲಭ್ಯವಾಗಿಲ್ಲ.

ಮತದಾನ ಮಾಡಿ ಜವಾಬ್ದಾರಿಯುತ ನಾಗರಿಕರಾಗೋಣ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇಶವೀಗ ಚುನಾವಣೆಯ ಹೊಸ್ತಿಲಿನಲ್ಲಿದೆ. ಈ ಬಾರಿ ನಡೆಯುವ ಚುನಾವಣೆಯು ಭಾರತದ ಭವಿಷ್ಯವನ್ನು ನಿರ್ಣಯಿಸುವ ಚುನಾವಣೆಯಾಗಿದೆ. ಕಳೆದ 10ವರ್ಷಗಳ ಆಡಳಿತ ಇಲ್ಲಿನ ಸಂವಿಧಾನದ ಆಶಯವನ್ನು ದುರ್ಬಲಪಡಿ ಸುವಂತಿತ್ತು ಎಂಬುದು ಎಲ್ಲರಿಗೂ ತಿಳಿದ ವಿಚಾರ. ಧಾರ್ಮಿಕ ಭಾವನೆ ಕೆರಳಿಸುವ ಭಾಷಣದ ಮುಖಾಂತರ ಮತಪೆಟ್ಟಿಗೆ ಭದ್ರಪಡಿಸುತ್ತಿದ್ದಾರೆ ಎಂದು ವೆಲ್ಫೇರ್ ಪಾರ್ಟಿ ಕರ್ನಾಟಕದ ರಾಜ್ಯಾಧ್ಯಕ್ಷ ತಾಹೇರ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶದ ಅಲ್ಪ ಸಂಖ್ಯಾತರಿಗೆ ಮತ್ತು ದಲಿತ, ಹಿಂದುಳಿದ ವರ್ಗಗಳಲ್ಲಿ ಅಭದ್ರತಾ ಭಾವನೆ ಹೆಚ್ಚಾಗುತ್ತಿದೆ. ಹೀಗಿರುವಾಗ ಪ್ರತಿಪಕ್ಷಗಳ ಒಕ್ಕೂಟ ಈ ದೇಶಕ್ಕೆ ಅಗತ್ಯವಿದೆ. ಮತದಾನ ಎಂಬ ಮೂಲಭೂತ ಹಕ್ಕುಗಳನ್ನು ಚಲಾಯಿಸುವ ಸಮಯ ಕೂಡಿ ಬಂದಿದೆ. ಈ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ ಎಲ್ಲರೂ ಇದರಲ್ಲಿ ಭಾಗಿಯಾಗುವಂತೆ ಮಾಡಲು ಶಕ್ತಿ ಮೀರಿ ಪ್ರಯತ್ನಿಸಬೇಕು ಎಂದು ಹೇಳಿದ್ದಾರೆ.

ನೀರಿಗಾಗಿ ಜಕ್ಕಲಿ ಗ್ರಾ.ಪಂಗೆ ಮುತ್ತಿಗೆ ಹಾಕಿ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 5ನೇ ವಾರ್ಡಿನ ಜನತಾ ಪ್ಲಾಟ್‌ನ ನೂರಾರು ನಿವಾಸಿಗಳು ಬದು ನಿರ್ಮಾಣ ಕೆಲಸ ಮುಗಿಸಿ ಖಾಲಿ ಕೊಡ ಹಿಡಿದು ಗ್ರಾಪಂಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಕುಬೇರಪ್ಪ ಕೊಡಗಾನೂರ ಮಾತನಾಡಿ, ನಮ್ಮ ವಾರ್ಡಿನಲ್ಲಿ ಕಳೆದ ಆರು ತಿಂಗಳಿಂದ ಕುಡಿಯುವ ನೀರಿಗಾಗಿ ತೊಂದರೆ ಅನುಭವಿಸುತ್ತಾ ಇದ್ದೇವೆ. ಈ ಬಗ್ಗೆ ಹಲವಾರು ಬಾರಿ ಗ್ರಾಪಂ ಅಧಿಕಾರಿಗಳಿಗೆ ತಿಳಿಸಿದರೂ ಪ್ರಯೋಜನವಾಗಿಲ್ಲ. ತಕ್ಷಣವೇ ನಮಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಆಗ್ರಹಿಸಿದರು.

ಇದೇ ವೇಳೆ ಪಂಚಾಯಿತಿಗೆ ಆಗಮಿಸುತ್ತಿದ್ದ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಎಸ್.ಎಸ್. ರಿತ್ತಿ ಅವರನ್ನು ಪ್ರತಿಭಟನಾಕಾರರು ತರಾಟೆಗೆ ತೆಗೆದುಕೊಂಡರು. ನಿವಾಸಿಗಳ ಸಮಸ್ಯೆಯನ್ನು ಆಲಿಸಿದ ಪಿಡಿಓ, ನಿಮಗಾದ ತೊಂದರೆಯನ್ನು ವಾರ್ಡಿನ ಸದಸ್ಯರೊಂದಿಗೆ ಮಾತನಾಡಿ ಸರಿಪಡಿಸಲು ಪ್ರಯತ್ನಿತ್ತೇನೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಬಸವ್ವ ಕೊಡಗಾನೂರ, ಸಜನಾ ಜಕ್ಕಲಿ, ಯಲ್ಲಮ್ಮ ಡಂಬಳ, ಮಮ್ಮಸಾಬ ಬಾಲೇಸಾಬನವರ, ಮಾಬಮ್ಮ ಕಳಕಾಪೂರ, ಮಮತಮ್ಮ ಬಾಲೇಸಾಬನವರ, ಖಾಶಿಂಬಿ ಜಾಲಿಹಾಳ, ದಾವಲಮ್ಮ ಗಡಾದ, ಮಮ್ಮಸಲೀಂ ಜಕ್ಕಲಿ, ಉಮೇಶ ಕೊಡಗಾನೂರ, ಇಸ್ಮಾಯಿಲ್ ಗಡಾದ, ಹನುಮಂತ ಕೊಡಗಾನೂರ, ಮೌಲುಸಾಬ ನದಾಫ್, ಆನಂದ ಬಾರಕೇರ, ಯಲ್ಲಪ್ಪ ಮುಕ್ಕಣ್ಣವರ, ಯಮನೂರ ಮಾದರ, ಯಲ್ಲಪ್ಪ ಬಾರಕೇರ, ರಾಜಾಸಾಬ್ ನಮಾಜಿ, ಬಾಬುಸಾಬ ಯಲಬುರ್ಗಿ ಮುಂತಾದವರಿದ್ದರು.

ಧಾರವಾಡ ಲೋಕಸಭಾ ಮತಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಶ್ರೀ ದಿಂಗಾಲೇಶ್ವರ ಮಹಾಸ್ವಾಮಿಗಳು, ಧಾರವಾಡ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ದಿವ್ಯ ಪ್ರಭು ಅವರಿಗೆ ಗುರುವಾರ ಮಧ್ಯಾಹ್ನ ನಾಮಪತ್ರ ಸಲ್ಲಿಸಿದರು.

ಹುಬ್ಬಳ್ಳಿ ನೇಹಾ ಹತ್ಯೆ ಪ್ರಕರಣ: 'ಲವ್ ಜಿಹಾದ್' ಆರೋಪ ನಿರಾಕರಿಸಿದ ಸರ್ಕಾರ; ಆರೋಪಿ ಬಂಧನ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿಯ ಕಾಲೇಜು ಕ್ಯಾಂಪಸ್‌ನಲ್ಲಿ ಕಾಂಗ್ರೆಸ್ ಕಾರ್ಪೊರೇಟರ್ ಮಗಳ ಹತ್ಯೆ ಪ್ರಕರಣಕ್ಕೆ ಬಿಜೆಪಿ ಸೇರಿದಂತೆ ಸಂಘಪರಿವಾರದ ಬೆಂಬಲಿಗರು 'ಲವ್ ಜಿಹಾದ್' ಆರೋಪ ಮಾಡುತ್ತಿದ್ದು, ರಾಜ್ಯ ಗೃಹ ಇಲಾಖೆ ಇದನ್ನು ನಿರಾಕರಿಸಿದ್ದು, ಕೊಲೆ ಆರೋಪಿಯನ್ನು ವಶಕ್ಕೆ ಪಡೆದಿದೆ.

ಗುರುವಾರ ಹುಬ್ಬಳ್ಳಿಯ ಬಿವಿಬಿ ಕಾಲೇಜು ಆವರಣದಲ್ಲಿ 23 ವರ್ಷದ ಮಾಸ್ಟರ್ಸ್ ಆಫ್ ಕಂಪ್ಯೂಟರ್ ಅಪ್ಲಿಕೇಷನ್ಸ್ (ಎಂಸಿಎ) ವಿದ್ಯಾರ್ಥಿನಿ ನೇಹಾ ಮೇಲೆ ಫಯಾಜ್ ಎಂಬಾತ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ. ತಪ್ಪಿಸಿಕೊಳ್ಳಲು ಯತ್ನಿಸುತ್ತಿದ್ದ ನೇಹಾಳನ್ನು ತಡೆದಿದ್ದ ಫಯಾಜ್, ಹಲವು ಬಾರಿ ಇರಿದಿರುವುದನ್ನು ಸಿಸಿಟಿವಿ ದೃಶ್ಯಾವಳಿಗಳು ತೋರಿಸಿವೆ. ಘಟನೆ ನಂತರ ಕೂಡನೇ ಆತನನ್ನು ಬಂಧಿಸಲಾಯಿತು.

ಸಂತ್ರಸ್ತೆಯ ತಂದೆ, ಕಾಂಗ್ರೆಸ್ ಕಾರ್ಪೊರೇಟರ್ ನಿರಂಜನ್ ಹಿರೇಮಠ ಮಾತನಾಡಿ, ಆರೋಪಿ ಫಯಾಜ್ ಮನೆಯವರಿಗೆ ಪರಿಚಿತನಾಗಿದ್ದು, ನೇಹಾಳನ್ನು ಹಿಂಬಾಲಿಸದಂತೆ ತಡೆಯಲು ಈ ಹಿಂದೆ ಯತ್ನಿಸಿದ್ದರು ಎನ್ನಲಾಗಿದೆ.

ಶ್ರೀ ರಂಭಾಪುರಿ ಜ.ಶಿವಾನಂದ ರ

ವಿಶ್ವ ಕಲಾ ದಿನಾಚರಣೆ ನಿಮಿತ್ತ ಆಯೋಜಿಸಿದ್ದ 'ಪಕ್ಷಿ ಪ್ರೇಮ' ಕಾರ್ಯಕ್ರಮದಲ್ಲಿ ಸುರೇಶ ಕುಂಬಾರ

ಪಕ್ಷಿ ಪ್ರೇಮ ಸದಾ ಇರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪಕ್ಷಿಗಳು ನಮ್ಮ ಚೈತನ್ಯಕ್ಕೆ ಹಾಗೂ ಕ್ರಿಯಾಶೀಲತೆಗೆ ಆದರ್ಶವಾಗಿವೆ. ಪಕೃತಿಯಲ್ಲಿ ಹಾರಾಡುವ ಹಕ್ಕಿಗಳಿಗೆ ನೀರು, ಕಾಳು ನೀಡಿ ಅವುಗಳ ಜೀವ ಮತ್ತು ಜೀವನಕ್ಕೆ ಸಹಕಾರ ನೀಡಬೇಕು. ಮಾನವರಾದ ನಾವು ಎಲ್ಲ ಜೀವಿಗಳ ಮೇಲೆ ದಯೆ ಹೊಂದಿರಬೇಕು ಎಂದು ಶರಣರು ಹೇಳಿದ್ದಾರೆ. ಅದರಂತೆ ಪಕ್ಷಿ ಪ್ರೇಮ ಎಂಬ ಪರಿಕಲ್ಪನೆ ವಿಭಿನ್ನವಾಗಿರುವ ಕಾರ್ಯಕ್ರಮವಾಗಿರುವದರಿಂದ ಇಂತಹ ಬಿರು ಬಿಸಿಲಿನ ತಾಪಕ್ಕೆ ಬಳಲುವ ಹಕ್ಕಿಗಳಿಗೆ ಸಹಕಾರ ನೀಡಿದರೆ ಪುಣ್ಯ ಗಳಿಸಿದಂತೆ. ಪಕ್ಷಿಗಳು ರೈತನ ಮಿತ್ರನಾಗಿದ್ದು, ಪಕ್ಷಿ ಪ್ರೇಮ ಸದಾ ಇರಲಿ ಎಂದು ಹಿರಿಯ ಸಹಾಯಕ ತೋಟಗಾರಿಕಾ ನಿರ್ದೇಶಕ ಸುರೇಶ ಕುಂಬಾರ ಕರೆ ನೀಡಿದರು.

ನವರಸ ಕಲಾ ಸಂಘ ಬೆಟಗೇರಿ, ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ, ನಯನತಾರಾ ಕಲಾ ಸಂಘ, ಶ್ರೀ ಗಣೇಶ ವಿವಿಧೋದ್ದೇಶಗಳ ಸೇವಾ ಸಂಸ್ಥೆ, ಬೆಟಗೇರಿ, ಭಾಗ್ಯಶ್ರೀ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಅಂತೂರ-ಬೆಂತೂರ ಇವುಗಳ ಸಹಯೋಗದಲ್ಲಿ ವಿಶ್ವ ಕಲಾ ದಿನಾಚರಣೆ ನಿಮಿತ್ತ ಆಯೋಜಿಸಿದ್ದ 'ಪಕ್ಷಿ ಪ್ರೇಮ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಂಜುನಾಥ ಹುಯಿಲಗೋಳ ಮಾತನಾಡಿ, ವಿಶ್ವಕಲಾ ದಿನಾಚರಣೆಯ ರೂವಾರಿ ಲಿಯೊನಾರ್ಡ ಡ ವಿಂಚಿ ಈ ಜಗತ್ತು ಕಂಡ ಮಹಾನ್ ಕಲಾವಿದ. ಅಂತಹ ಕಲಾವಿದನ ಜನ್ಮ ದಿನವನ್ನು ವಿಶ್ವ ಕಲಾ ದಿನಚರಣೆಯನ್ನಾಗಿ ಆಚರಿಸಲಾಗುತ್ತದೆ. ಮೊನಾಲಿಸಾ ಕಲಾಕೃತಿ ರಚಿಸಿದ ಕಲಾವಿದರ ಸ್ಮರಣೆಯಲ್ಲಿ ಪಕ್ಷಿ, ನಿಸರ್ಗವನ್ನು ಸ್ಮರಿಸಲು ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸುವದು ಮತ್ತು ಪಕೃತಿಯ ಕುರಿತು ಕಾವ್ಯ ವಾಚನ, ಪಕ್ಷಿಗಳಿಗೆ ಕಾಳು ನೀರು ನೀಡುವ ಪರಿಕಲ್ಪನೆಯ ಕಾರ್ಯಕ್ರಮ ವಿಶೇಷವಾಗಿದೆ. ಮನುಜ ತನ್ನ ಸ್ಥಳದಲ್ಲಿ ಗಿಡ ಮರ ಬೆಳಸಿದರೆ ಪಕ್ಷಿಗಳು ಗುಡ್ಡ ಬೆಟ್ಟಗಳಲ್ಲಿ ಬೀಜ ತೆಗೆದುಕೊಂಡು ಹೋಗಿ ಬಿಡುತ್ತವೆ. ಆದರೆ ಬೆಟ್ಟದ ಮೇಲೆ ಗಿಡ ಮರ ನೆಟ್ಟವರು ಪಕ್ಷಿಗಳೇ. ಹೀಗಾಗಿ ಬೀಜ ಪ್ರಸರಣಕ್ಕೆ ಪಕ್ಷಿಗಳು ಸಾಕ್ಷಿಯಾಗಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಿರ್ಮಲ ಸೇವಾ ಸಂಸ್ಥೆಯ ಅಧ್ಯಕ್ಷೆ ನಿರ್ಮಲಾ ತರವಾಡೆ, ಮನುಷ್ಯ ಸದಾ ಸತ್ಕಾರ್ಯದಲ್ಲಿ ತೊಡಗಬೇಕು. ಇಂತಹ ವಾತಾವರಣದಲ್ಲಿ ನಮಗೆ ಸಾಧ್ಯವಾದಷ್ಟು ಪ್ರಾಣಿ-ಪಕ್ಷಿಗಳಿಗೆ ಕಾಳು, ನೀರು ನೀಡುವದರಿಂದ ನಮಗೆ ಪುಣ್ಯ ಬರುತ್ತದೆ. ಈ ಬಗ್ಗೆ ಎಲ್ಲರಲ್ಲಿ ಜಾಗೃತಿ ಮೂಡಲಿ ಎಂದರು.

ವೇದಿಕೆಯ ಮೇಲೆ ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ, ಪರಿಸರ ಪ್ರೇಮಿಗಳಾದ ಪ್ರಕಾಶ ಅಕ್ಕಿ, ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ, ಕವಯಿತ್ರಿ ಮಂಜುಳಾ ವೆಂಕಟೇಶಯ್ಯ, ರಮೇಶ ಹಾದಿಮನಿ, ಸಂಸ್ಕೃತಿ, ಶಾರದಾ ಟಿ., ವಿಶ್ವನಾಥ ಬೇಂದ್ರೆ, ಕಲಾವಿದರಾದ ಎಸ್.ಎಫ್ ಬೆನಕಣ್ಣವರ, ಜಗದೀಶ ಶೀಲವಂತ, ನಿರಂಜನ ಬಗಲಿ ಉಪಸ್ಥಿತರಿದ್ದರು.

ಕವಿಗಳಾದ ನಾಜಿಯಾ ನೂರಭಾಷಾ, ರಮಾಚಿಗಟೇರಿ, ಶಿವಲೀಲಾ ಧನ್ನಾ, ಸಂಗೀತ ಅರಳಿಕಟ್ಟಿ, ನಾಗರತ್ನಾ ಹೊಸಮನಿ, ಕೊಟ್ರೇಶ ಜವಳಿ, ಕಸ್ತೂರಿ ಕಡಗದ, ಭಾಗ್ಯಶ್ರೀ ಹುರಕಡ್ಲಿ ಪರಿಸರದ ಕುರಿತು ಕವಿತೆ ವಾಚಿಸಿದರು. ಶಿಕ್ಷಕ ಕಳಕೇಶ ಅರಕೇರಿ ಪ್ರಾರ್ಥಿಸಿದರು. ಪ್ರೊ. ಬಸವರಾಜ ನೆಲಜೇರಿ ನಿರೂಪಿಸಿ ವಂದಿಸಿದರು. ಜಿ.ಬಿ. ಕಲ್ಯಾಣಶಟ್ಟಿ, ದ್ಯಾಮಣ್ಣ ಉಗಲಾಟ, ಗಣೇಶ ಕಬಾಡಿ, ಧರ್ಮೇಂದ್ರ ಇಟಗಿ, ಬಸಮ್ಮ ಹಳ್ಳಿ ಕಾರ್ಯಕ್ರಮದ ಯಶಸಿಗೆ ಶ್ರಮಿಸಿದರು.

> ಇಂತಹ ಬಿರು ಬಿಸಿಲಿಗೆ ಪಕ್ಷಿಗಳು ಕಾಳು ನೀರಿನ ಕೊರತೆಯಿಂದ ಬಳಲುತ್ತವೆ, ತಾಪಮಾನಕ್ಕೆ ನಲುಗುತ್ತವೆ. ಪಕ್ಷಿಗಳ ಪ್ರೇಮ ಅಮೂಲ್ಯವಾಗಿದ್ದು, ಅವುಗಳಿಗೆ ಕಾಳು, ನೀರು ಕೊಡುವ ಕಾರ್ಯ ಶ್ಲಾಘನೀಯ. ಪಕ್ಷಿಗಳ ಮೇಲಿನ ಅಕ್ಕರೆ, ಅವುಗಳ ಒಡನಾಟ ನಿಮ್ಮ ಮನಸ್ಸನ್ನು ಶಕ್ತಿಯುತವಾಗಿ ಮಾಡುತ್ತವೆ ಎಂದು ಸುರೇಶ ಕುಂಬಾರ ಅಭಿಪ್ರಾಯಪಟ್ಟರು.

ಹಂತಕನಿಗೆ ಜೀವಾವಧಿ ಶಿಕ್ಷೆ ವಿಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಏಪ್ರಿಲ್ 18ರಂದು ಹುಬ್ಬಳ್ಳಿಯ ಬಿವಿಬಿ ಕ್ಯಾಂಪಸ್‌ನಲ್ಲಿ ಅಮಾಯಕ ವಿದ್ಯಾರ್ಥಿನಿ ನೇಹಾ ಹಿರೇಮಠರ ಭೀಕರ ಕೊಲೆ ಪ್ರಕರಣ ಆಘಾತ ತರಿಸಿದೆ. ಇದನ್ನು ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಉಗ್ರವಾಗಿ ಖಂಡಿಸುತ್ತದೆ. ಇಂತಹ ಅಮಾನವೀಯ ಕೃತ್ಯಗೈದ ಪಾತಕಿ ಫಯಾಜ್ ಮೇಲೆ ಕಠಿಣ ಕಾನೂನು ಕ್ರಮ ಕೈಗೊಂಡು ಜೀವಾವಧಿ ಶಿಕ್ಷೆ ವಿಧಿಸಿ, ಯುವತಿಯ ಕುಟುಂಬಕ್ಕೆ ನ್ಯಾಯ ಸಿಗುವಂತೆ ಕ್ರಮ ಕೈಗೊಳ್ಳಬೇಕೆಂದು ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ರೋಣ ತಾಲೂಕಾಧ್ಯಕ್ಷ ಎಂ.ಎಚ್. ನದಾಫ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಕಾಲೇಜು ವಿದ್ಯಾರ್ಥಿನಿಯರಿಗೆ ಕಿರುಕುಳ ಕೊಡುವವರಿಗೆ ಕಠಿಣ ಕಾನೂನು ಕ್ರಮಗಳನ್ನು ಕೈಗೊಂಡು ವಿದ್ಯಾರ್ಥಿನಿಯರಿಗೆ ಸುರಕ್ಷಿತ ಭಾವನೆ ಮೂಡುವಂತೆ ಮಾಡಬೇಕೆಂದು ಅವರು ಕರ್ನಾಟಕ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಪ್ರತ್ಯೇಕ ರಾಜ್ಯದ ಬೇಡಿಕೆ: ನಾಗಾಲ್ಯಾಂಡ್‌ನ 6 ಜಿಲ್ಲೆಗಳಲ್ಲಿ ಶೂನ್ಯ ಮತದಾನ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಏಕೈಕ ಲೋಕಸಭಾ ಸ್ಥಾನಕ್ಕೆ ಶುಕ್ರವಾರ ಒಂದೇ ಹಂತದಲ್ಲಿ ಮತದಾನ ನಡೆದಿದೆ. ಆದರೆ, ಈಶಾನ್ಯ ರಾಜ್ಯದ ಆರು ಜಿಲ್ಲೆಗಳಲ್ಲಿ ಪ್ರತ್ಯೇಕ ರಾಜ್ಯದ ಬೇಡಿಕೆ ಮುಂದಿಟ್ಟುಕೊಂಡು ಜನರು ಮತದಾನದಿಂದ ದೂರ ಉಳಿದಿದ್ದಾರೆ ಎಂದು ಮಾಧ್ಯಮಗಳಲ್ಲಿ ವರದಿ ಮಾಡಿದೆ.

ಚೈತ್ರ ಸಂಸ್ಕೃತ ಬಾಲಕೇಂದ್ರದ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ವತಿಯಿಂದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಚೈತ್ರ ಸಂಸ್ಕೃತ ಬಾಲಕೇಂದ್ರದ ಉದ್ಘಾಟನೆ ಜರುಗಿತು.

ಆಶ್ರಮದ ಗುರುಗಳಾದ ಶಂಕ್ರಪ್ಪ ಮಾತನಾಡಿ, ಸಂಸ್ಕೃತ ನಮ್ಮ ದೇಶದ ಮೂಲಭಾಷೆ. ನೀವು ಪೂಜಾ ಸಮಯದಲ್ಲಿ ಹೇಳುವ ಎಲ್ಲ ಶ್ಲೋಕಗಳು ಸಂಸ್ಕೃತದಲ್ಲಿವೆ. ನಮ್ಮ ರಕ್ತದ ಕಣಕಣದಲ್ಲಿ ಸಂಸ್ಕೃತ ಬೆರೆತುಕೊಂಡಿದೆ. ಆದರೆ ಅದು ಸಂಸ್ಕೃತ ಎಂಬ ತಿಳುವಳಿಕೆ ನಮಗಿಲ್ಲ. ಕಾರಣ ಬಿ.ಜಿ. ಅಣ್ಣಿಗೇರಿ ಗುರುಗಳು ಆಧ್ಯಾತ್ಮ ಮತ್ತು ಸಂಸ್ಕೃತಕ್ಕೆ ತುಂಬಾ ಪ್ರೋತ್ಸಾಹ ಕೊಡುತ್ತಿದ್ದರು. ಎಲ್ಲ ಮಕ್ಕಳು ಚೆನ್ನಾಗಿ ಸಂಸ್ಕೃತ ಕಲಿತು ಸಂಸ್ಕಾರವಂತಾಗಿರಿ ಎಂದು ನುಡಿದರು.

ಬಿ.ಜಿ.ಎ. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ, ಪ್ರತಿಷ್ಠಾನದ ಕಾರ್ಯದರ್ಶಿ ಶಿವಾನಂದ ಕಟ್ಟಿ, ಚೈತ್ರ ಸಂಸ್ಕೃತ ಸಂಚಾಲಕಿ ಶೈಲಜಾ ಕುಲಕರ್ಣಿ, ಸಂಸ್ಕೃತಿ ಭಾರತೀ ಕಾರ್ಯಕರ್ತರಾದ ಗಣೇಶ ಸವಣೂರ, ಆಶ್ರಮದ ಟ್ರಸ್ಟಿ ಕಳಕಪ್ಪ, ಸಂಸ್ಕೃತ ಶಿಕ್ಷಕರಾದ ಮಹಾಂತೇಶ ಮಾದರ ಮುಂತಾದವರು ಉಪಸ್ಥಿತರಿದ್ದರು.

ಶ್ರೀ ಜ. ತೋಂ. ಸಂಸ್ಕೃತ ಪಾಠಶಾಲೆಯ ಮುಖ್ಯಾಧ್ಯಾಪಕ ಎಸ್.ಎನ್. ಶಿಂಪಿಗೇರ ಸ್ವಾಗತಿಸಿದರು. ಮಹಾಂತೇಶ ಮಾದರ ವಂದಿಸಿದರು.

ಆರೋಪಿಯನ್ನು ಗಲ್ಲಿಗೇರಿಸಲು ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಹುಬ್ಬಳ್ಳಿಯ ಕಾಲೇಜಿನ ಆವರಣದಲ್ಲಿ ನೇಹಾ ಹಿರೇಮಠ ಎಂಬ ವಿದ್ಯಾರ್ಥಿನಿಯನ್ನು ಹತ್ಯೆಗೈದ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿ ಶುಕ್ರವಾರ ಶಿರಹಟ್ಟಿಯಲ್ಲಿ ತಾಲೂಕಾ ಅಭಿವೃದ್ಧಿ ಸಮಾನ ಮನಸ್ಕರ ವೇದಿಕೆ ವತಿಯಿಂದ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ಸಂತೋಷ ಕುರಿ, ಮಹಾಂತೇಶ ದಶಮನಿ, ನೇಹಾ ಹಿರೇಮಠ ಓರ್ವ ಪ್ರತಿಭಾವಂತ ವಿದ್ಯಾರ್ಥಿನಿಯಾಗಿದ್ದು, ತರಗತಿ ಮುಗಿಸಿ ಬರುತ್ತಿರುವ ಸಮಯದಲ್ಲಿ ವಿದ್ಯಾರ್ಥಿನಿಯ ಮೇಲೆ ಫಯಾಜ ಎಂಬ ಆರೋಪಿ ಕಾಲೇಜು ಆವರಣದಲ್ಲಿ ಬರ್ಬರವಾಗಿ ಹತ್ಯೆಗೈದಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವ ಘಟನೆಯಾಗಿದೆ. ನಿನ್ನೆ ತಡರಾತ್ರಿ ಗದಗನಲ್ಲೂ ಸಹ ಸರಣಿ ಕೊಲೆ ನಡೆದಿದ್ದು, ಈ ಪ್ರಕರಣದ ಆರೋಪಿಗಳನ್ನೂ ಕೂಡಲೇ ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಗದೀಶ ಇಟ್ಟೇಕಾರ, ಬಸವರಾಜ ಕಂಬಳಿ, ಚಂದ್ರು ಜೋಗೇರ ಮುಂತಾದವರು ಉಪಸ್ಥಿತರಿದ್ದರು.

ಬೆಳಗಟ್ಟಿ ಗ್ರಾಮದಲ್ಲಿ ಮತದಾನ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ವಡವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಳಗಟ್ಟಿ ಗ್ರಾಮದಲ್ಲಿ ಕಳೆದ ಲೋಕಸಭಾ ಚುನಾವಣೆಯಲ್ಲಿ ಶೇ. 43ರಷ್ಟು ಕಡಿಮೆ ಮತದಾನವಾಗಿರುವ ಹಿನ್ನೆಲೆಯಲ್ಲಿ ಜಿ.ಪಂ ಯೋಜನಾಧಿಕಾರಿ ಎನ್.ಕೆ. ನಿರ್ಮಲ, ಎಆರ್‌ಓ ಅಮಿತ ಬಿದರಿ, ತಹಸೀಲ್ದಾರ ಅನಿಲ ಬಡಿಗೇರ, ಇಓ ಪ್ರಶಾಂತರಾವ್ ನೇತೃತ್ವದಲ್ಲಿ ಗ್ರಾಮದಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಗ್ರಾಮದ ಮತದಾರರ ಪಟ್ಟಿಯಲ್ಲಿರುವ ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತದಾನ ಮಾಡಿ ಪ್ರಜಾಪ್ರಭುತ್ವ ಶಕ್ತಿಯನ್ನು ಹೆಚ್ಚಿಸಬೇಕು. ವಲಸೆ ಹೋಗಿರುವ ತಮ್ಮ ಸಂಬಂಧಿಕರನ್ನು ಕರೆಯಿಸಿ ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡಿಸಬೇಕೆಂದು ಕರೆ ನೀಡಿದರು.

ಗ್ರಾ.ಪಂ ಪಿಡಿಓ, ಟಿಐಇಸಿ ಮಂಜುನಾಥ ಸ್ವಾಮಿ, ಅಶೋಕ ಧನವೆ, ಸಂತೋಷ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ

■ ವಿಜಯಸಾಕ್ಷಿ ಸುದ್ದಿ, ರಾಣೇಬೆನ್ನೂರು

ಲೋಕಸಭಾ ಚುನಾವಣೆಯ ಪ್ರಯುಕ್ತ ಪಟ್ಟಣದಲ್ಲಿ ನಡೆದ ಬೃಹತ್ ಮೆರವಣಿಗೆಯಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸಂಪೂರ್ಣ ಬೆಂಬಲ ನೀಡುವಂತೆ ಮತದಾರರಲ್ಲಿ ವಿನಂತಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಣೇಬೆನ್ನೂರು ಕ್ಷೇತ್ರದ ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಬಡವರು, ಜನಸಾಮಾನ್ಯರು ಹಾಗೂ ಮಹಿಳೆಯರಿಗೆ ಅಭೂತಪೂರ್ವ ಕೊಡುಗೆಗಳನ್ನು ನೀಡಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರು ಅಪಾರ ಪ್ರಶಂಸೆ ವ್ಯಕ್ತಪಡಿಸುತ್ತಿದ್ದಾರೆ ಎಂದರು.

ನಮ್ಮ ಮೇಲೆ ವಿಶ್ವಾಸವಿಟ್ಟು ಮತ ಹಾಕಿದವರಿಗೆ ಋಣಿಯಾಗಿರುತ್ತೇವೆ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯ ಮಾಡುತ್ತೇವೆ ಎಂದರು. ಮಾಜಿ ಶಾಸಕ ಡಿ.ಆರ್. ಪಾಟೀಲ, ರಾಣೇಬೆನ್ನೂರು ಶಾಸಕರು ಪ್ರಕಾಶ್ ಕೋಳಿವಾಡ, ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಹಾವೇರಿ ಲೋಕಸಭಾ ಕ್ಷೇತ್ರದಿಂದ ರುದ್ರಪ್ಪ ಕುಂಬಾರ್ ಪಕ್ಷೇತರ ಅಭ್ಯರ್ಥಿಯಾಗಿ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ರಘುನಂದನ್ ಮೂರ್ತಿ ಅವರಿಗೆ ನಾಮಪತ್ರ ಸಲ್ಲಿಸಿದರು.

ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಮಠಗಳು ಸಂಸ್ಕಾರ ಕೊಡುವ ಕೇಂದ್ರಗಳಾಗಲಿ

■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಮಠಗಳ ಕೊಡುಗೆ ಅಪಾರ. ಧರ್ಮದ ದಾರಿ ತಪ್ಪಿ ಕವಲು ದಾರಿಯಲ್ಲಿ ಸಾಗುತ್ತಿರುವ ಜನ ಸಮುದಾಯಕ್ಕೆ ಮಠಗಳು ಸಂಸ್ಕಾರ ಸೌಜನ್ಯ ಕಲಿಸುವ ಕೇಂದ್ರಗಳಾಗಿ ಕಾರ್ಯ ನಿರ್ವಹಿಸಬೇಕೆಂದು ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಚಿತ್ತಾಪುರ ತಾಲೂಕಿನ ಹಲಕರಟಿ ಗ್ರಾಮದಲ್ಲಿ ಶ್ರೀಮದ್ ರಂಭಾಪುರಿ ಶಾಖಾ ಸಿದ್ಧೇಶ್ವರ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ದೇಶಕ್ಕೊಂದು ಸಂವಿಧಾನ ಇರುವಂತೆ ವೀರಶೈವ ಧರ್ಮಕ್ಕೆ ಒಂದು ಸಂವಿಧಾನವಿದೆ. ಅಷ್ಟಾವರಣ, ಪಂಚಾಚಾರ ಮತ್ತು ಷಟ್ಸ್ಥಲಗಳೇ ವೀರಶೈವ ಧರ್ಮ ಸಂವಿಧಾನದ ಮೂಲ ಅಂಶಗಳಾಗಿವೆ. ಜಗದ ಕತ್ತಲೆ ಕಳೆಯಲು ಸೂರ್ಯ ಬೇಕು. ಮನುಷ್ಯನಲ್ಲಿ ಮನೆ ಮಾಡಿರುವ ಅಜ್ಞಾನವೆಂಬ ಕತ್ತಲೆ ಕಳೆಯಲು ಗುರು ಬೇಕು. ಗುರುವಿನಿಂದ

ಆಚಾರಗಳ ಅರಿವು ಪ್ರಾಪ್ತವಾಗುತ್ತದೆ. ವೀರಶೈವ ಧರ್ಮದಲ್ಲಿ ಗುರುವಿಗೆ ಅತ್ಯಂತ ಪ್ರಾಮುಖ್ಯತೆ ಕೊಟ್ಟಿದ್ದಾರೆ.

ಶ್ರೀಮದ್ರಂಭಾಪುರಿ ಶಾಖಾ ಹಲಕರಟಿ ಶ್ರೀ ಸಿದ್ಧೇಶ್ವರ ಹಿರೇಮಠದ ರಾಜಶೇಖರ ಶಿವಾಚಾರ್ಯ ಸ್ವಾಮಿಗಳಿಗೆ ಸೇಡಂ ಶಿವಶಂಕರಮಠದ ಶಿವಶಂಕರ ಶಿವಾಚಾರ್ಯ ಸ್ವಾಮಿಗಳು ಸಂಸ್ಕಾರ ನೀಡಿ ಷಟ್ಸ್ಥಲ ಬ್ರಹ್ಮೋಪದೇಶ ನೀಡಿದರು. ನಂತರ ಶ್ರೀ ರಂಭಾಪುರಿ ಜಗದ್ಗುರುಗಳು ದಂಡ ಕಮಂಡಲ ಸಮೇತ ಪಂಚ ಮುದ್ರೆ ನೀಡಿ ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ನೂತನ ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಸಂವಿಧಾನದಂತೆ ನಡೆದು ಸಕಲ ಜನಸಮುದಾಯಕ್ಕೆ ಒಳಿತನ್ನು ಉಂಟು ಮಾಡುವ ಸಂಕಲ್ಪ ಕೈಗೊಂಡರು.

ಈ ಸಮಾರಂಭದಲ್ಲಿ ಅಧಿಕಾರ ಅನುಗ್ರಹಿಸಿದ ಸೇಡಂ ಶಿವಶಂಕರ ಮಠದ, ಚಿತ್ತಾಪುರ ಕಂಬಳೇಶ್ವರ ಮಠದ, ದಿಗ್ಗಾಂವಿ ಪಂಚಗೃಹ ಹಿರೇಮಠದ, ಸುಗೂರು ಹಿರೇಮಠದ, ನೀಡಗುಂದ ಮಠದ, ತೊನಸನಹಳ್ಳಿ ಚರಂತೇಶ್ವರ ಮಠದ, ಮಳಖೇಡದ ಬೃಂಗಿ ಮಠ ಮತ್ತು ಕಾರ್ತಿಕೇಶ್ವರ ಮಠದ, ಗುಂಡಪಲ್ಲಿ ಮಠದ ಹಾಗೂ ಎರಗೋಡು ಮಠದ ಶ್ರೀಗಳವರು ಉಪಸ್ಥಿತರಿದ್ದರು.

ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಮಲ್ಲಿಕಾರ್ಜುನ ಮತ್ತು ಸಂಗಡಿಗರಿಂದ ಸಂಗೀತ ಸಮಾರಂಭ, ಶಾಲಾ ಬಾಲಿಕೆಯರಿಂದ ಭರತ ನಾಟ್ಯ ಜರುಗಿತು. ಚಂದನಕೇರಾ ಅಭಿನವ ರಾಚೋಟೇಶ್ವರ ಶ್ರೀಗಳು ನಿರೂಪಿಸಿದರು.

> ಸಮರ್ಥ ಗುರುವೊಬ್ಬನನ್ನು ಆಶ್ರಯಿಸಿದರೆ ಜೀವನದಲ್ಲಿ ಏನೆಲ್ಲ ಸಂಪತ್ತು ಸಾಧಿಸಲು ಸಾಧ್ಯವಾಗುತ್ತದೆ. ಶ್ರೀ ಜಗದ್

'ಪುಲಿಗೆರೆ ಉತ್ಸವ'ದ ಇಂದಿನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ 'ಪುಲಿಗೆರೆ ಉತ್ಸವ'ದಲ್ಲಿ ಏ.20ರಂದು ಉದಯರಾಗ-2 ಕಾರ್ಯಕ್ರಮದಲ್ಲಿ ಬೆಳಿಗ್ಗೆ 6 ಗಂಟೆಗೆ ಲಕ್ಷ್ಮೇಶ್ವರದ ಕಲಾವಿದ ಕೃಷ್ಣ ಕ್ಷತ್ರಿಯ ಅವರಿಂದ ಶಹನಾಯಿ ವಾದನ, 7 ಗಂಟೆಗೆ ಹುಬ್ಬಳ್ಳಿಯ ಕೃತಿಕಾ ಜಂಗಿನಮಠ ಅವರಿಂದ ಬಾನ್ಸುರಿ ವಾದನ ನಡೆಯಲಿದೆ.

ಸಂಜೆ 6 ಗಂಟೆಗೆ ಬೆಂಗಳೂರಿನ ಮನೋಹರ ಪಟವರ್ಧನ ಮತ್ತು ತಂಡದವರಿಂದ ಹಿಂದೂಸ್ತಾನಿ ಗಾಯನ ನೆರವೇರಲಿದೆ. 7.30ಕ್ಕೆ ಬೆಂಗಳೂರಿನ ನಂದಿನಿ ಮೆಹ್ತಾ ಮತ್ತು ಕೆ.ಮುರಳಿ ಅವರಿಂದ ಕಥಕ್ ಕಿ ಕಾನಾಕ್ ನೃತ್ಯ ವೈಭವ ಜರುಗಲಿದೆ. ರಾತ್ರಿ 8.30ಕ್ಕೆ ಬೆಂಗಳೂರಿನ ಡಾ.ರೇಖಾ ರಾಜು ಮತ್ತು ತಂಡದವರಿಂದ ಮೋಹಿನಿಅಟ್ಟಂ ನೃತ್ಯ ಪ್ರದರ್ಶನ ನಡೆಯಲಿದೆ.

'ಪುಲಿಗೆರೆ ಉತ್ಸವ'ದಲ್ಲಿ ಉದಯರಾಗ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪುಲಿಗೆರೆ ಉತ್ಸವ ಮೊದಲ ದಿನದ ಉದಯರಾಗ-1ರಲ್ಲಿ ಶುಕ್ರವಾರ ಬೆಳಿಗ್ಗೆ ಮಂಗಳವಾದ್ಯ ಮತ್ತು ಸಂಗೀತ ವಾದ್ಯಗಳ ನಂತರ ಕುಮುಟಾದ ರೇಷ್ಮಾ ಭಟ್ ಪ್ರಸ್ತುತ ಪಡಿಸಿದ ಸುಮಧುರ ಹಿಂದೂಸ್ತಾನಿ ಗಾಯನ ಕೇಳುಗರನ್ನು ಮಂತ್ರಮುಗ್ಧವಾಗಿಸಿತು.

ಮೊದಲು ಭಿಲಾಸ್ಪಾನಿತೋಡಿ ರಾಗದಲ್ಲಿ ಹಿಂದೂಸ್ತಾನಿ ಗಾಯನ ಪ್ರಸ್ತುತಪಡಿಸಿದ ನಂತರ ಭೀಮಪಲಾಸ್ ರಾಗದಲ್ಲಿ ಅಮುಗಿದೇವಯ್ಯನ 'ಇಹಪರನಲ್ಲ-ಪರಾಪರನಲ್ಲ' ಎಂಬ ವಚನವನ್ನು ಸೋಮೇಶ್ವರನಿಗೆ ಸಮರ್ಪಿಸಿದರು. ರಾಗ ಮಧುಕಂಸದಲ್ಲಿ 'ನಾ ನಿನ್ನ ಧ್ಯಾನದೊಳಿರಲು' ಎಂಬ ಪುರದಂರದಾಸರ ಪದವನ್ನು ತಮ್ಮ ಸುಮಧುರ ಕಂಠಸಿರಿಯಿಂದ ಹಾಡಿ ಸಂಗೀತ ಪ್ರೇಮಿಗಳನ್ನು ಗಂಧರ್ವ ಲೋಕಕ್ಕೊಯ್ದರು.

ಹಿಂದಿ ಭಜನ್‌ದೊಂದಿಗೆ ಉದಯರಾಗ-1ರ ಸಂಗೀತ ಸೇವೆ ಸಂಪನ್ನಗೊಂಡಿತು. ಪ್ರಸಿದ್ಧ ತಬಲಾಪಟು, ಆಕಾಶವಾಣಿ ಹಿರಿಯ ಕಲಾವಿದ ಅಲ್ಲಮಪ್ರಭು ತಬಲಾ ಸಾಥ್, ಮಧುಸೂಧನ್ ಭಟ್ ಹಾರ್ಮೋನಿಯಂ ಮತ್ತು ಸ್ಥಳೀಯ ಯುವ ಪ್ರತಿಭೆ ಪ್ರಿಯಾಂಕ ಹಾವೇರಿ ತಂಬೂರಿ ಸಾಥ್ ನೀಡಿದ್ದು ಎಲ್ಲರ ಮೆಚ್ಚುಗೆಗೆ ಕಾರಣವಾಯಿತು.

ಸಮಾಜ ಘಾತುಕರಿಗೆ ಭಯ ಇಲ್ಲದಂತಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನೇಹಾ ಎಂಬ ವಿದ್ಯಾರ್ಥಿನಿಯನ್ನು ಅಮಾನವೀಯವಾಗಿ ಹತ್ಯೆಗೈದ ದುಷ್ಕರ್ಮಿಯನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಹಿಂದೂಪರ ಸಂಘಟನೆಯ ಮುಖಂಡ ರಾಜು ಅರಳಿ ಆಗ್ರಹಿಸಿದ್ದಾರೆ.

ಯುವತಿ ನೇಹಾಳ ಹತ್ಯೆಯಾಗಿರುವುದನ್ನು ಗಮನಿಸಿದರೆ, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಇಂತಹ ಅನೇಕ ಘಟನೆಗಳು ನಡೆಯುತ್ತಿರುವುದರಿಂದ ಸಮಾಜ ಘಾತಕರಿಗೆ ಭಯ ಇಲ್ಲದಂತಾಗಿದೆ. ಸರ್ಕಾರ ಈಗಲಾದರೂ ಗಂಭೀರವಾಗಿ ಪರಿಗಣಿಸಿ, ಇಂತಹ ಘಟನೆ ಮರುಕಳಿಸದಿರುವ ಹಾಗೆ ಸರಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಮತದಾನ ಮಹತ್ವ ಕುರಿತು ಜಾಗೃತಿ

ಎ. 22ರಿಂದ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ-2024ರ ನಿಮಿತ್ತ ಗದಗ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಎಪ್ರಿಲ್ 22 ರಿಂದ 27 ರವರೆಗೆ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಅವರು ತಿಳಿಸಿದ್ದಾರೆ.

ಎಪ್ರಿಲ್ 22 ರಂದು ಮಧ್ಯಾಹ್ನ 2 ಗಂಟೆಗೆ ಶಿರಹಟ್ಟಿ ತಾಲೂಕು ಕ್ರೀಡಾಂಗಣದಲ್ಲಿ ಪಂಚಾಯತ್ ರಾಜ್ ಮತ್ತು ಆರೋಗ್ಯ ಇಲಾಖೆ ನಡುವೆ, ಎಪ್ರಿಲ್ 23 ರಂದು ಮಧ್ಯಾಹ್ನ 2 ಗಂಟೆಗೆ ಮುಂಡರಗಿ ತಾಲೂಕು ಕ್ರೀಡಾಂಗಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಶಿಕ್ಷಣ ಇಲಾಖೆ, ಎಪ್ರಿಲ್ 24 ರಂದು ಮಧ್ಯಾಹ್ನ 2 ಗಂಟೆಗೆ ರೋಣ ತಾಲೂಕು ಕ್ರೀಡಾಂಗಣದಲ್ಲಿ ಮಾಧ್ಯಮ ತಂಡದವರೊಂದಿಗೆ 1ನೇ ನಾಕೌಟ್ ವಿಜೇತ ತಂಡ, ಎಪ್ರಿಲ್ 25 ರಂದು ನರಗುಂದ ತಾಲೂಕು ಕ್ರೀಡಾಂಗಣದಲ್ಲಿ ಕಂದಾಯ ಇಲಾಖೆ ಮತ್ತು 2ನೇ ನಾಕೌಟ್ ವಿಜೇತ ತಂಡ, ಎಪ್ರಿಲ್ 27 ರಂದು ಮ 2 ಗಂಟೆಗೆ ಗದಗ ವಿ.ಡಿ.ಎಸ್.ಟಿ ಶಾಲೆಯ ಮೈದಾನದಲ್ಲಿ ಫೈನಲ್ ತಂಡ-1 ಮತ್ತು ಫೈನಲ್ ತಂಡ-2. ಈ ತಂಡಗಳ ನಡುವೆ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ನಡೆಯಲಿದೆ ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಆಯಾ ತಂಡದ ಪಂದ್ಯಗಳು ಜರುಗುವ ದಿನಗಳಂದು ಕ್ರೀಡಾಪಟುಗಳು ಸರಿಯಾದ ಸಮಯಕ್ಕೆ ಮೈದಾನಕ್ಕೆ ಆಗಮಿಸಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ 'ಪುಲಿಗೆರೆ ಉತ್ಸವ'ಕ್ಕೆ ಚಾಲನೆ

ಪುಲಿಗೆರೆಯಲ್ಲಿ ಸಾಂಸ್ಕೃತಿಕ ಜೀವಕಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಾಡಿನ ಸಾಂಸ್ಕೃತಿಕ ಹಿರಿಮೆ-ಗರಿಮೆಗಳನ್ನು ಸಾರುವ ಪ್ರಾಚೀನ ದೇವಸ್ಥಾನಗಳಲ್ಲಿ ಸಂಗೀತ, ಸಾಹಿತ್ಯ, ಸಾಂಸ್ಕೃತಿಕ, ಕಲಾತ್ಮಕ ಕಾರ್ಯಕ್ರಮಗಳನ್ನು ಸಂಘಟಿಸುವುದರಿಂದ ನಮ್ಮ ಸಾಂಸ್ಕೃತಿಕ ಕ್ಷೇತ್ರವನ್ನು ಮತ್ತಷ್ಟು ಶ್ರೀಮಂತಗೊಳಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಕೊಡುಗೆ ಅಪಾರ ಎಂದು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ ಮತ್ತು ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಸಹಯೋಗದಲ್ಲಿ ನಡೆಯುತ್ತಿರುವ 7ನೇ ವರ್ಷದ 'ಪುಲಿಗೆರ ಉತ್ಸವ'ಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಳಾಹೀನಗೊಂಡಿದ್ದ ಶ್ರೀ ಸೋಮೇಶ್ವರ ದೇವಸ್ಥಾವನ್ನು ತಮ್ಮದೇ ಪ್ರತಿಷ್ಠಾನದಿಂದ 4.5 ಕೋಟಿ ರೂ ಖರ್ಚು ಮಾಡಿ ಜೀರ್ಣೋದ್ಧಾರಗೊಳಿಸಿದ್ದಾರೆ. ಸಾಂಸ್ಕೃತಿಕ ಜೀವಕಳೆ ತುಂಬಲು ಪ್ರತಿವರ್ಷ ಲಕ್ಷಾಂತರ ರೂ ಖರ್ಚು ಮಾಡಿ ಸಂಗೀತ, ನೃತ್ಯ, ಚಿತ್ರ ಸಂಭ್ರಮದ 'ಪುಲಿಗೆರೆ ಉತ್ಸವ' ಆಯೋಜಿಸುತ್ತಿದ್ದಾರೆ. ಆ ಮೂಲಕ ದೇಶದ ಹತ್ತಾರು ರಾಜ್ಯಗಳಲ್ಲಿ ಭಾರತೀಯ ಕಲೆ, ಸಂಗೀತ, ಶಿಲ್ಪಕಲೆ, ಇತಿಹಾಸ ಪರಂಪರೆ ಉಳಿಸಿ ಬೆಳೆಸುವ ಮಹೋನ್ನತ ಕಾರ್ಯ ಮಾಡುತ್ತಿದ್ದಾರೆ. ಸಾಂಸ್ಕೃತಿಕ ವೈಭವ ಶ್ರೀಮಂತಗೊಳಿಸುವ ಈ ಉತ್ಸವ ನಿರಂತರವಾಗಿ ನಡೆಯಲು ಈ ಭಾಗದ ಜನರ ಸಹಕಾರ-ಪಾಲ್ಗೊಳ್ಳುವಿಕೆ ಅಗತ್ಯ ಎಂದರು.

ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ಪುಲಿಗೆರೆ ದೇವಸ್ಥಾನದಲ್ಲಿ ಸಾಹಿತ್ಯ, ಸಾಂಸ್ಕೃತಿಕ ವೈಭವ ಮೇಳೈಸಬೇಕು. ಆ ಮೂಲಕ ನಮ್ಮ ಸಂಸ್ಕೃತಿ, ಸಂಪ್ರದಾಯಗಳು ಉಳಿಯಬೇಕು ಎಂಬ ಡಾ. ಸುಧಾಮೂರ್ತಿಯವರ ಉದ್ದೇಶ, ಸಾಮಾಜಿಕ ಕಳಕಳಿ ಶ್ಲಾಘನೀಯ. ಅವರ ಈ ಕಾರ್ಯಕ್ಕೆ ಎಲ್ಲರೂ ಸಹಕಾರ ನೀಡುವ ಮೂಲಕ ಪುಲಿಗೆರೆ ಉತ್ಸವ ನಿರಂತರವಾಗಿಸೋಣ ಎಂದರು.

ಈ ವೇಳೆ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ವ್ಹಿ.ಎಲ್. ಪೂಜಾರ, ಚನ್ನಪ್ಪ ಜಗಲಿ, ಪೂರ್ಣಾಜಿ ಖರಾಟೆ, ಗೋವಿಂದ ಕುಲಕರ್ಣಿ, ಸುರೇಶ ರಾಚನಾಯ್ಕರ್, ಗೀತಾದೇವಿ ಮಾನ್ವಿ, ಮಾಲಾದೇವಿ ದಂದರಗಿ, ಸುಮಾ ಚೋಟಗಲ್, ಈಶ್ವರ ಮೇಡ್ಲೇರಿ, ಡಾ.ವಿಜಯದತ್ತ, ಡಾ. ಎಸ್. ಜೆ. ತಟ್ಟಿ, ಡಾ. ಪಿ.ಡಿ. ತೋಟದ, ಡಾ. ಎಸ್.ಜಿ. ಹೂವಿನ, ಬಸವರಾಜ ಮೆಣಸಿನಕಾಯಿ, ಅರ್ಚಕರಾದ ಸೋಮನಾಥ ಪೂಜಾರ, ಚಿಕ್ಕರಸ ಪೂಜಾರ, ಪ್ರದೀಪ ಪೂಜಾರ ಸೇರಿ ಹಲವರಿದ್ದರು.



> ಶುಕ್ರವಾರದಿಂದ 3 ದಿನಗಳ ಕಾಲ ಪ್ರಾತಃಕಾಲ ಮತ್ತು ಸಂಧ್ಯಾಕಾಲ ಪೂಜೆ, ಅರ್ಚನೆ, ಗಂಟೆನಾದದೊಂದಿಗೆ ಸಂಗೀತ-ನೃತ್ಯ ಸಂಭ್ರಮ, ಐತಿಹಾಸಿಕ ದೇವಸ್ಥಾನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಮೇಳೈಸಲಿದೆ. ಈ ಕಾರ್ಯಕ್ರಮದಲ್ಲಿ ರಾಷ್ಟ್ರಮಟ್ಟದ ಪ್ರಸಿದ್ಧ ಸಂಗೀತ ಕಲಾವಿದರು, ನೃತ್ಯಪಟುಗಳಿಂದ ವೈವಿಧ್ಯಮಯ ಕಾರ್ಯಕ್ರಮ ನಡೆಸಲಾಗುತ್ತಿದೆ. ಇನ್ಫೋಸಿಸ್ ಸಂಸ್ಥೆ ತಾಂತ್ರಿಕ ಕ್ಷೇತ್ರದಲ್ಲಿ ವಿಶ್ವಮಾನ್ಯತೆ ಹೊಂದಿದ್ದರೂ ಸಹ ಈ ಸಂಸ್ಥೆಯ ಒಡತಿ ಡಾ. ಸುಧಾ ನಾರಾಯಣ ಮೂರ್ತಿ ಅವರ ಸಾಮಾಜಿಕ, ಸಾಂಸ್ಕೃತಿಕ ಕಳಕಳಿ ಪ್ರಶಂಸನೀಯ.
>
> – ನಾಗಲಕ್ಷ್ಮೀ ಕೆ.ರಾವ್.
> ಜಂಟಿ ನಿರ್ದೇಶಕಿ, ಭಾರತೀಯ ವಿದ್ಯಾಭವನ.

ಶ್ರೀ ಸೇವಾಲಾಲ, ಶ್ರೀ ಮರಿಯಮ್ಮದೇವಿ ಪ್ರತಿಷ್ಠಾಪನೆ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಅತ್ತಿಕಟ್ಟಿ ಗ್ರಾಮದಲ್ಲಿ ಸಂತ ಶ್ರೇಷ್ಠ ಶ್ರೀ ಸೇವಾಲಾಲರ ಮೂರ್ತಿ ಹಾಗೂ ಶ್ರೀ ಮರಿಯಮ್ಮದೇವಿ ಮೂರ್ತಿ ಪ್ರತಿಷ್ಠಾಪನೆ, ನೂತನ ದೇವಸ್ಥಾನ ಲೋಕಾರ್ಪಣೆ, ಕಳಸಾರೋಹಣ ಹಾಗೂ ಧರ್ಮಸಭೆ ಕಾರ್ಯಕ್ರಮಗಳು ಜರುಗಿದವು.

ಮೂರ್ತಿ ಪ್ರತಿಷ್ಠಾಪನಾ ಕಾರ್ಯವನ್ನು ಮಹಾಲಿಂಗಪುರ ಮಹಾಲಿಂಗೇಶ್ವರಮಠದ ಶ್ರೀ ಮಹಾಲಿಂಗೇಶ್ವರ ಮಹಾಸ್ವಾಮಿಗಳು ನೆರವೇರಿಸಿದರು. ಷ.ಬ್ರ. ಮುದಿಕೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಕಲಕೇರಿ ವೀರಾಪೂರ ಪಾಲ್ಗೊಂಡಿದ್ದರು.

ಎಂ.ಕೆ. ಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ 25 ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಈ ದೇವಸ್ಥಾನದ ಜೀರ್ಣೋದ್ಧಾರ ಹಾಗೂ ಕಳಸಾರೋಹಣ ಕಾರ್ಯಕ್ರಮ ನಡೆಯುತ್ತಿರುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಾ. ವೆಂಕಟೇಶ ರಾಠೋಡ ಮಾತನಾಡಿ, ಹಿಂದುಳಿದ ಸಮಾಜವಾದ ತಾಂಡಾದ ಜನರು ಎಲ್ಲರೂ ಸೇರಿ ಅಭೂತಪೂರ್ವವಾದ ಕಾರ್ಯಕ್ರಮ ನೆರವೇರಿಸುತ್ತಿರುವುದು ಬಂಜಾರ ಸಮಾಜಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಐ.ಎಸ್. ಪೂಜಾರ, ರಾಮಣ್ಣ ಮೇಗಲಮನಿ, ಸಿದ್ದಪ್ಪ ಕಳಸಾಪೂರ ಸೇರಿದಂತೆ ಸಮಾಜದ ಗುರು-ಹಿರಿಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

ಅಲ್ಲಮ ಪ್ರಭುಸ್ವಾಮಿ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಹೊರ ವಲಯದಲ್ಲಿರುವ ಅಲ್ಲಮ ಪ್ರಭುಸ್ವಾಮಿಮಠದ ಜಾತ್ರಾ ಮಹೋತ್ಸವದಲ್ಲಿ ಏಪ್ರಿಲ್ 23ರಂದು ಸಾಯಂಕಾಲ 5 ಗಂಟೆಗೆ ರಥೋತ್ಸವ, ಏ.24ರಂದು ಸಾಯಂಕಾಲ 5 ಗಂಟೆಗೆ ಸಿದ್ದರಾಮಯ್ಯ ಹಿರೇಮಠ ಇವರಿಂದ ಕಡುಬಿನ ಕಾಳಗ ಜರುಗುವುದು ಎಂದು ಮಾಹಾಂತೇಶ ನೀರಜಿಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

29 ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ ಏ.12ರಿಂದ ಏ.19ರವರೆಗೆ ರಜಾ ದಿನಗಳನ್ನು ಹೊರತುಪಡಿಸಿ, ಆರು ದಿನಗಳಲ್ಲಿ ಒಟ್ಟು 29 ಜನ ಅಭ್ಯರ್ಥಿಗಳಿಂದ 44 ನಾಮಪತ್ರಗಳು ಸಲ್ಲಿಕೆ ಆಗಿವೆ ಎಂದು ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಲೋಕಸಭಾ ಮತಕ್ಷೇತ್ರಕ್ಕೆ ಏ.12ರ ಮೊದಲ ದಿನ ಒಬ್ಬ ಅಭ್ಯರ್ಥಿಯಿಂದ ಒಂದು ನಾಮಪತ್ರ, ಏ.15ರ 2ನೇ ದಿನ ಐದು ಜನ ಅಭ್ಯರ್ಥಿಗಳಿಂದ 11 ನಾಮಪತ್ರಗಳು, ಏ.16ರ 3ನೇ ದಿನ ನಾಲ್ಕು ಜನ ಅಭ್ಯರ್ಥಿಗಳಿಂದ 9 ನಾಮಪತ್ರಗಳು, ಏ.17ರ 4ನೇ ದಿನದಂದು ನಾಲ್ಕು ಜನ ಅಭ್ಯರ್ಥಿಗಳಿಂದ ಐದು ನಾಮಪತ್ರಗಳು, ಏ.18ರ 5ನೇ ದಿನದಂದು ನಾಲ್ಕು ಜನ ಅಭ್ಯರ್ಥಿಗಳಿಂದ ಆರು ನಾಮಪತ್ರಗಳು ಮತ್ತು ಏ.19ರ 6ನೇ ದಿನವಾದ ಶುಕ್ರವಾರ ನಾಮಪತ್ರಗಳ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, 11 ಜನ ಅಭ್ಯರ್ಥಿಗಳಿಂದ 12 ನಾಮಪತ್ರಗಳು ಸಲ್ಲಿಕೆ ಆಗಿವೆ ಎಂದು ಅವರು ತಿಳಿಸಿದ್ದಾರೆ.

ಏ.20ರಂದು ಬೆಳಿಗ್ಗೆ 11 ಗಂಟೆಯಿಂದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿರುವ ಚುನಾವಣಾಧಿ ಕಾರಿಗಳ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ ಕಾರ್ಯ ಜರುಗಲಿದೆ ಎಂದು ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮದುವೆ ಮನೆಯಲ್ಲಿ ಮತದಾನ ಜಾಗೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪಟ್ಟಣದ ಶಾದಿಮಹಲ್‌ನಲ್ಲಿ ಶುಕ್ರವಾರ ಏರ್ಪಡಿಸಿದ್ದ ನದಾಫ-ಹರ್ಲಾಪೂರ ಕುಟುಂಬದ ಮದುವೆ ಸಮಾರಂಭದಲ್ಲಿ ತಾಲೂಕು ಪಂಚಾಯಿತಿಯ ಸರ್ವ ಸಿಬ್ಬಂದಿಗಳು ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ನೇತೃತ್ವದಲ್ಲಿ ಭಾಗವಹಿಸಿ ಮದುವೆ ಮಂಟಪದಲ್ಲಿಯೇ ಕಡ್ಡಾಯ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು.

ಕಲಕೇರಿ ಗ್ರಾಮದ ಯಮನೂರಸಾಬ ಅವರ ಜೊತೆ ಜಹೀದಾಬೇಗಂ ನವಜೀವನಕ್ಕೆ ಕಾಲಿಟ್ಟರು. ಈ ವೇಳೆ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮದುವೆಗೆ ಆಗಮಿಸಿದ್ದ ಬಂಧುಗಳಲ್ಲಿ ವಧು-ವರರ ಜೊತೆ ವೇದಿಕೆಯ ಮೇಲಿನಿಂದಲೇ ಮತದಾನದ ಕುರಿತು ಜಾಗೃತಿ ಮೂಡಿಸಿದರು.

ತಾ.ಪಂ ಇಓ ವಿಶ್ವನಾಥ ಹೊಸಮನಿ ಈ ಸಂದರ್ಭದಲ್ಲಿ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಉತ್ತಮ ನಾಯಕರನ್ನು ಆಯ್ಕೆ ಮಾಡುವ ಅವಕಾಶ ನಿಮ್ಮದಾಗಿದೆ. ಪ್ರತಿಯೊಬ್ಬರೂ ಹಕ್ಕು ಚಲಾಯಿಸಿ, ಸಂವಿಧಾನದ ಆಶಯ ಮತ್ತು ಪ್ರಜಾಪ್ರಭುತ್ವ ಯಶಸ್ವಿಗೊಳಿಸಬೇಕು. ಮತದಾನದಿಂದ ಯಾರೂ ದೂರ ಉಳಿಯಬಾರದು ಎಂದರು.

ವಧು-ವರರಿಗೆ ಹಾಗೂ ಮದುವೆಗೆ ಹಾಜರಾದವರಿಗೆ ಚುನಾವಣೆಯಲ್ಲಿ ಮತದಾನ ನಮ್ಮ ಹಕ್ಕು ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಬೇಕೆಂದು ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಪಿಡಿಓ ಫಕ್ರುದ್ದೀನ್ ನಧಾಪ, ಸಂತೋಷ ಮೇಟಿ, ಅಕ್ಕಮಹಾದೇವಿ ರುದ್ರೇಶ್ವರಮಠ, ತಾ.ಪಂ ಸಿಬ್ಬಂದಿಗಳಾದ ಎಚ್.ಎಂ. ಕಾತರಕಿ, ಸಿ.ಬಿ. ಪಾಟೀಲ, ಅಶೋಕ ಅಣ್ಣಿಗೇರಿ, ಸಿದ್ದು ಮಡಿವಾಳರ, ಮೋಹನ ಹೊಂಬಳ, ಗ್ರಾ.ಪಂ ಸಿಬ್ಬಂದಿಗಳು ಸೇರಿದಂತೆ ಇತರರಿದ್ದರು.

ನಗರಸಭೆ ಉಪಾಧ್ಯಕ್ಷರ ಪುತ್ರ ಸೇರಿ ನಾಲ್ವರ ಭೀಕರ ಹತ್ಯೆ । ಗುರುವಾರ ತಡರಾತ್ರಿ ನಡೆದ ಘಟನೆ

ಹಂತಕರ ಪತ್ತೆಗೆ ಬಲೆ ಬೀಸಿದ ಪೊಲೀಸ್ ಇಲಾಖೆ

■ ವಿ